

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 263 | ₹ ಬೆಲೆ: 4 | Wednesday, 13, December.2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23



# ಸುವರ್ಣ ಸಂಭ್ರಮಾಚರಣೆ

## 25 ವರ್ಷಗಳ ಅವಧಿಯಲ್ಲಿ ಮಹಾನ್ ಕರ್ನಾಟಕದ ನಿರ್ಮಾಣಕ್ಕೆ ಸ್ಪಷ್ಟ ದಿಕ್ಸೂಚಿ ಹೊಂದಲಿ: ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್



**ಸುವರ್ಣಸೌಧ: ಬೆಳಗಾವಿ:** ದೇಶದಲ್ಲಿಯೇ ಅತಿಹೆಚ್ಚು ತೆರಿಗೆ ಪಾವತಿಸುವ ಎರಡನೇ ರಾಜ್ಯ ಕರ್ನಾಟಕವಾಗಿರುವುದು ಇಲ್ಲಿನ ಉದ್ಯೋಗ ಶೀಲತೆಗೆ ಸಾಕ್ಷಿಯಾಗಿದೆ. ಉತ್ತರದ ಬೆಳಗಾವಿಯಿಂದ ದಕ್ಷಿಣದ ಬೆಂಗಳೂರಿನವರೆಗೆ ನಾಡು ವೈವಿಧ್ಯಮಯ ಐತಿಹಾಸಿಕ, ನೈಸರ್ಗಿಕ ತಾಣಗಳನ್ನು ಹೊಂದಿದೆ.ಮುಂಬರುವ 25 ವರ್ಷಗಳ ಅವಧಿಯಲ್ಲಿ ರಾಜ್ಯದ ಸರ್ವಾಂಗೀಣ ಪ್ರಗತಿಗೆ ಸ್ಪಷ್ಟ ದಿಕ್ಸೂಚಿಯನ್ನು ರಾಜ್ಯ ಹಾಕಿಕೊಂಡು ಮಹಾನ್ ಕರ್ನಾಟಕ, ಮಹಾನ್ ಭಾರತ ನಿರ್ಮಿಸಬೇಕು ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಸುವರ್ಣಸೌಧದ ಮುಂಭಾಗದಲ್ಲಿ ಕರ್ನಾಟಕ ವಿಧಾನ ಮಂಡಲವು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷಗಳಾದ ಸಂದರ್ಭದಲ್ಲಿ ಆಯೋಜಿಸಿದ್ದ ಸುವರ್ಣ ಸಂಭ್ರಮಾಚರಣೆ ಹಾಗೂ ಕರ್ನಾಟಕ ವಿಧಾನ ಮಂಡಲದ ಮಾಜಿ ಸಭಾಪತಿಯವರು ಹಾಗೂ ಸಭಾಧ್ಯಕ್ಷರುಗಳ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು,

ಕಳೆದ ಐವತ್ತು ವರ್ಷಗಳ ಅವಧಿಯಲ್ಲಿ ರಾಜ್ಯವು ಪ್ರತಿಯೊಂದು ಕ್ಷೇತ್ರದಲ್ಲಿ ಅಭಿವೃದ್ಧಿಯ ದಾಪುಗಾಲು ಹಾಕುತ್ತಿದೆ.ಪ್ರಾಚೀನ ಹಾಗೂ ಮಧ್ಯಕಾಲೀನ ಇತಿಹಾಸದ ಪುಟಗಳನ್ನು ತಿರುವಿದಾಗ ಈ ನಾಡು ಭವ್ಯ ಪರಂಪರೆ, ಭೌಗೋಳಿಕ ವ್ಯಾಪ್ತಿ ಹೊಂದಿತ್ತು ಎಂದು ತಿಳಿಯುತ್ತದೆ.ಸಂಗೀತ,ಕಲೆ,ಸಾಂಸ್ಕೃತಿಕ ಕ್ಷೇತ್ರಕ್ಕೆ ನಾಡಿನ ಕೊಡುಗೆ ದೊಡ್ಡದು.ಶಿಕ್ಷಣ,ಔದ್ಯೋಗೀಕರಣದಲ್ಲಿಯೂ ರಾಜ್ಯ ಪ್ರಗತಿ ಸಾಧಿಸಿದೆ.ಕನ್ನಡ ಎಂಟು ಸಾಹಿತಿಗಳು ಜ್ಞಾನಪೀಠ ಪ್ರಶಸ್ತಿಗೆ ಭಾಜನರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ರಾಜ್ಯ ಕ್ಕೆ ಕರ್ನಾಟಕವೆಂದು ನಾಮಕರಣವಾಗಿ 50 ವರ್ಷಗಳು ಪೂರ್ಣಗೊಂಡ ಸಂದರ್ಭದಲ್ಲಿ ವರ್ಷವೀಡಿ ಅರ್ಥಪೂರ್ಣ ಸುವರ್ಣ ಸಂಭ್ರಮಾಚರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.ಸ್ವಾತಂತ್ರ್ಯಾ ನಂತರ ಇಂದು ಇರುವ ವಿಶಾಲ ಕರ್ನಾಟಕ ಒಂದಾಗಿರಲಿಲ್ಲ.

ವಿವಿಧ ಆಡಳಿತ ಪ್ರಾಂತ್ಯಗಳಲ್ಲಿ ಕನ್ನಡ ಭಾಷಿಕರು ಹರಿದು ಹಂಚಿ ಹೋಗಿದ್ದರು.

ಅನೇಕ ಮಹನೀಯರ ತ್ಯಾಗ,ಬಲಿದಾನಗಳಿಂದ ಅಖಂಡ ಕರ್ನಾಟಕ ನಿರ್ಮಾಣ ಸಾಧ್ಯವಾಯಿತು. ಆ ಹೋರಾಟಗಾರರನ್ನೆಲ್ಲ ಸ್ಮರಿಸಬೇಕು.1956 ರಲ್ಲಿ ಒಂದಗೂಡಿದರೂ ಕೂಡ ರಾಜ್ಯಕ್ಕೆ ಮೈಸೂರು ರಾಜ್ಯ ಎಂದೇ ಕರೆಯಲಾಗುತ್ತಿತ್ತು.

1973 ರಲ್ಲಿ ಡಿ.ದೇವರಾಜ ಅರಸು ಅವರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿದ್ದು ಐತಿಹಾಸಿಕ ಕಾರ್ಯವಾಗಿದೆ.

ಭಾಷೆಯ ಅಭಿಮಾನ ಇರಬೇಕು, ದುರಭಿಮಾನಗಳಾಗಬಾರದು. ಯಾವುದೇ ಭಾಷೆ ಕಲಿಯಬಹುದು ನಮ್ಮ ಮಾತೃ ಭಾಷೆ ಮರೆಯಬಾರದು.

ಸುವರ್ಣ ಸಂಭ್ರಮಾಚರಣೆ ಈ ಸಂದರ್ಭದಲ್ಲಿ ನಾವು ಕನ್ನಡಿಗರ ಜೊತೆ ಕನ್ನಡದಲ್ಲಿಯೇ ಮಾತನಾಡುವ ನಿರ್ಣಯ ಪಾಲಿಸಬೇಕು. ನಮ್ಮ ನೆಲ,ಜಲ,ಕಲೆ,ಸಂಸ್ಕೃತಿ ,ಪರಂಪರೆಗಳ ಅರಿವು ಹೊಂದಬೇಕು ಎಂದರು.

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ,ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡ ನಂತರ ಆಗಿರುವ ಸರ್ವಾಂಗೀಣ ವಿಕಾಸಕ್ಕೆ ಕೊಡುಗೆ ನೀಡಿರುವ ಹಿರಿಯರನ್ನು ಸ್ಮರಿಸುವುದು ನಮ್ಮೆಲ್ಲರ ಜವಾಬ್ದಾರಿ ಮತ್ತು ಕರ್ತವ್ಯವಾಗಿದೆ. ಮುಂದಿನ ಪೀಳಿಗೆಗೆ ಒಂದು ಮಾದರಿಯಾದ ರಾಜ್ಯ ಮತ್ತು ಪರಂಪರೆಯನ್ನು ನಾವು ನೀಡುವ ಕೆಲಸ ಕಾರ್ಯಗಳನ್ನು ನಾವು ಮಾಡಬೇಕು.

ಪ್ರೀತಿ ಪೂರ್ವಕ ದ್ವೇಷ ರಹಿತ ರಾಜ್ಯ ನಮ್ಮದು ಆ ಹಿರಿಮೆ ಗರಿಮೆ ಎತ್ತಿ ಹಿಡಿಯಬೇಕು ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ,ಹಿಂದಿನ ಹಿರಿಯರು ಸವೆಸಿದ ಹಾದಿ ಹಾಗೂ ಮಾರ್ಗದರ್ಶನ ಸದಾ ಕಾಲ ನಮಗೆ ಬೇಕು.ಸರ್ಕಾರ ಹಾಗೂ ವಿಧಾನಮಂಡಲದ ಸಮನ್ವಯ, ಸಹಕಾರದಿಂದ ಈ ಅರ್ಥಪೂರ್ಣ ಕಾರ್ಯಕ್ರಮ ಸಾಧ್ಯವಾಗಿದೆ ಎಂದರು.

ಕಾನೂನು,ಸಂಸದೀಯ ವ್ಯವಹಾರಗಳು,ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ ಮಾತನಾಡಿ,1973 ರ ನವೆಂಬರ್ 1 ರಂದು ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣವಾಯಿತು.

ಕಳೆದ ಐವತ್ತು ವರ್ಷಗಳ ಅವಧಿಯಲ್ಲಿ ನಾಡಿನಲ್ಲಿ ಮಹತ್ವದ ಬದಲಾವಣೆಗಳು, ಅಭಿವೃದ್ಧಿಯಾಗಿವೆ.ಗಂಡು ಮೆಟ್ಟಿನ ನಾಡು ಬೆಳಗಾವಿಯ ಸುವರ್ಣ ಸೌಧದ ಎದುರಿನಲ್ಲಿ ಈ ಮಹತ್ವದ ಕಾರ್ಯಕ್ರಮ ನಡೆಯುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಮಾತನಾಡಿ,ರಾಜ್ಯವನ್ನು ಸಮಗ್ರವಾಗಿ ಗುರುತಿಸಬೇಕು, ಪ್ರಾದೇಶಿಕ ಭೇಧ ಭಾವಗಳಿಗೆ ಅವಕಾಶ ಉಂಟು ಮಾಡಬಾರದು,ರಾಜ್ಯದ ಅಖಂಡತೆ, ಏಕತೆ ನಾವು ಉಳಿಸಬೇಕು ಎಂದರು.

## ವಿಧಾನ ಮಂಡಲದ ಮಾಜಿ ಸಭಾಪತಿಗಳು, ಸಭಾಧ್ಯಕ್ಷರಿಗೆ ಸನ್ಮಾನ





## ಮಹಿಳೆಯನ್ನ ವಿವಸ್ತ್ರ ಗೊಳಿಸಿದ ಪ್ರಕರಣ: ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಂಡ ಹೈಕೋರ್ಟ್

ಬೆಳಗಾವಿ: ಬೆಳಗಾವಿಯ ವಂಟಮೂರಿ ಗ್ರಾಮದಲ್ಲಿ ಮಹಿಳೆಯನ್ನು ಬೆತ್ತಲೆಗೊಳಿಸಿ ಹಲ್ಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಂಡು, ಪ್ರಕರಣದ ತನಿಖೆ ನಡೆಸಿ ವರದಿ ಸಲ್ಲಿಸಲು ಸರ್ಕಾರಕ್ಕೆ ಸೂಚಿಸಿದೆ.

ಭಾರತ, ಸ್ವಾತಂತ್ರ್ಯದ ಅಮೃತ ಮಹೋತ್ಸವ ಆಚರಿಸುತ್ತಿದೆ. ಕರ್ನಾಟಕದಂತಹ ಪ್ರಗತಿಪರ ರಾಜ್ಯದಲ್ಲಿ ಇಂತಹ ಘಟನೆ ಕಳವಳಕಾರಿಯಾಗಿದೆ. ಜೊತೆಗೆ ಮಾಧ್ಯಮಗಳಲ್ಲಿ ಸಂತ್ರಸ್ತೆಯ ಫೋಟೋ, ಸಂದರ್ಶನ ಬಿತ್ತರಿಸದಂತೆ ನಿರ್ಬಂಧ ಹೇರಲಾಗಿದೆ. ಕೆಲ ಮಾಧ್ಯಮಗಳಲ್ಲಿ ಸಂತ್ರಸ್ತೆಯ ಫೋಟೋ, ವಿಡಿಯೋ ಬಿತ್ತರಿಸಲಾಗುತ್ತಿದೆ. ಇದರಿಂದ ಸಂತ್ರಸ್ತೆ ಘನತೆಗೆ ಧಕ್ಕೆಯಾಗುವ ಹಿನ್ನೆಲೆಯಲ್ಲಿ ನಿರ್ಬಂಧಿಸಲಾಗಿದೆ. ಆದರೆ, ಘಟನೆಯ ಸುದ್ದಿ ಪ್ರಸಾರಕ್ಕೆ ಯಾವುದೇ ನಿರ್ಬಂಧವಿಲ್ಲ ಎಂದು ಹೈಕೋರ್ಟ್ನ ಮುಖ್ಯ ನ್ಯಾಯಾಧೀಶರಾದ ಪ್ರಸನ್ನ ಬಿ.ವರಾಳೆ ಹಾಗೂ ನ್ಯಾ.ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ಪೀಠ ಆದೇಶಿಸಿದೆ.

## ರಾಜಭವನಕ್ಕೆ ಬಾಂಬ್ ಬೆದರಿಕೆ ಕರೆ



ಬೆಂಗಳೂರು: ರಾಜಭವನಕ್ಕೆ ಬಾಂಬ್ ಬೆದರಿಕೆ ಕರೆ ಬಂದಿದೆ. ಸೋಮವಾರ ರಾತ್ರಿ 11:30ರ ವೇಳೆಗೆ ಯಾರೋ ದುಷ್ಕರ್ಮಿಗಳು ಕರೆ ಮಾಡಿ ಬಾಂಬ್ ಇಟ್ಟಿರುವುದಾಗಿ ಬೆದರಿಕೆಯೊಡ್ಡಿದ್ದಾರೆ.

ಪೊಲೀಸ್ ಕಂಟ್ರೋಲ್ ರೂಮ್‌ಗೆ ಕರೆ ಮಾಡಿ ದುಷ್ಕರ್ಮಿಗಳು ಬೆದರಿಕೆ ಹಾಕಿದ್ದಾರೆ. ಈ ಹಿನ್ನೆಲೆ ಬೆದರಿಕೆ ಜಾಡು ಹಿಡಿದು ಪೊಲೀಸರು ತನಿಖೆಗೆ ಮುಂದಾಗಿದ್ದಾರೆ. ಬಾಂಬ್ ಬೆದರಿಕೆ ಕರೆ ಸಂಬಂಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಈ ಕಿಡಿಗೇಡಿಗಳು ಎನ್‌ಐಎ ಅಧಿಕಾರಿಗಳಿಗೆ ಬೆದರಿಕೆ ಕರೆ ಮಾಡಿದ್ದು, ಬಾಂಬ್ ಇಟ್ಟಿರುವುದಾಗಿ ಬೆದರಿಕೆ ಹಾಕಿದ್ದಾರೆ. ಎನ್‌ಐಎ ಅಧಿಕಾರಿಗಳಿಗೆ ಕರೆ ಮಾಡಿ ರಾಜಭವನದಲ್ಲಿ ಬಾಂಬ್ ಇಟ್ಟಿರುವುದಾಗಿ ಹೇಳಿದ್ದಾರೆ. ಈ ಹಿನ್ನೆಲೆ ಎನ್‌ಐಎ ಅಧಿಕಾರಿಗಳು ಬೆಂಗಳೂರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಈ ಕುರಿತು ಕೇಂದ್ರ ವಿಭಾಗದ ಪೊಲೀಸರು ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ರಾಯಬಾಗ ಮತಕ್ಷೇತ್ರ ವ್ಯಾಪ್ತಿಯ 39 ಕೆರೆಗಳ ನೀರು ತುಂಬಿಸುವ ಯೋಜನೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ

**ಸುವರ್ಣಸೌಧ: ಬೆಳಗಾವಿ:** ಬೆಳಗಾವಿ ಜಿಲ್ಲೆ ರಾಯಬಾಗ ಮತಕ್ಷೇತ್ರದ ರಾಯಬಾಗ ಮತ್ತು ಚಿಕ್ಕೋಡಿ ತಾಲೂಕುಗಳ ವ್ಯಾಪ್ತಿಯ 39 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮ ವಹಿಸುವುದಾಗಿ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹೇಳಿದರು.

ಮಂಗಳವಾರ ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಭಾಗವಹಿಸಿ ಶಾಸಕ ದುರ್ಯೋಧನ ಐಹೊಳೆ ಅವರ ಪ್ರಶ್ನೆಗೆ ಉತ್ತರಿಸಿದರು.

ಈ ಯೋಜನೆಯ ಕಾಮಗಾರಿಯು ಶೇ. 80 ರಷ್ಟು ಪೂರ್ಣಗೊಂಡಿದ್ದು, ಯೋಜನೆಯ ಜಾಕವೇಲ್ ಮತ್ತು ಪಂಪ್ ಹೌಸ್ ನಿರ್ಮಾಣ ಸ್ಥಳದಲ್ಲಿ ರೈತರು ತಕರಾರು ಮಾಡಿರುವುದರಿಂದ ಕಾಮಗಾರಿ ಸ್ಥಗಿತವಾಗಿದೆ. ತಕರಾರು ಮಾಡಿರುವ ರೈತ ನ್ಯಾಯಾಲಯದಲ್ಲಿ ಈ ಕುರಿತು ಮೊಕದ್ದಮೆ ಹೂಡಿದ್ದು, ಸಮಸ್ಯೆಯನ್ನು ಬಗೆಹರಿಸಿ



ಕಾಮಗಾರಿ ಪೂರ್ಣಗೊಳಿಸಲು ಶೀಘ್ರ ಕ್ರಮವಹಿಸಲಾಗುವುದು. ಜಲಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳನ್ನು ಈ ಕುರಿತು ಚರ್ಚಿಸಲು ರೈತರ ಬಳಿ ಕಳಿಸಲಾಗುವುದು. ಶಾಸಕರು, ಅಧಿಕಾರಿಗಳು ಸಂಬಂಧಪಟ್ಟ ರೈತರೊಂದಿಗೆ ಚರ್ಚಿಸಿ ಸೌಹಾರ್ದವಾಗಿ ಸಮಸ್ಯೆಯನ್ನು ಬಗೆಹರಿಸಬೇಕು. ಇಲಾಖೆಯಿಂದ ಅಗತ್ಯ ಅನುದಾನ, ಸಹಕಾರ ನೀಡಲಾಗುವುದೆಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕರಗಾಂವ ಏತ ನೀರಾವರಿ ಕಾಮಗಾರಿಯನ್ನು ಪುನರ್ ಪ್ರಾರಂಭಿಸಲು ಶಾಸಕರು ವಿನಂತಿಸಿದ್ದು, ಈ ಕುರಿತು ಪರಿಶೀಲಿಸಿ ಸೂಕ್ತ ಕ್ರಮವಹಿಸುವುದಾಗಿ ಅವರು ತಿಳಿಸಿದರು.

ಶಿಂಧೋಗಿ ಭಾಗದ 8 ಹಳ್ಳಿಗಳ ಕುಡಿಯುವ ನೀರಿನ, ನೀರಾವರಿ ಸಮಸ್ಯೆಗಳ ಪರಿಹರಿಸಲು ಕ್ರಮ: ಪ್ರಶ್ನೋತ್ತರ ವೇಳೆಯಲ್ಲಿ ಸವದತ್ತಿ ಯಲ್ಲಮ್ಮಾ ವಿಧಾನಸಭಾ ಕ್ಷೇತ್ರದ ಶಾಸಕ ವಿಶ್ವಾಸ ವಸಂತ ವೈದ್ಯ ಅವರು ಮಾತನಾಡಿ, ಸವದತ್ತಿ ಯಲ್ಲಮ್ಮಾ ವಿಧಾನಸಭಾ ವ್ಯಾಪ್ತಿಯಲ್ಲಿ ಬರುವ ಮಲಪ್ರಭಾ ಎಡದಂಡೆ ಕಾಲುವೆ ವ್ಯಾಪ್ತಿಯ ಬಲದಂಡೆ ಕಾಲುವೆಗೆ ನಿರ್ಮಿಸಿರುವ ರಿವರ್ ಸೈಫನ್ ಒಡೆದಿರುವುದರಿಂದ ಶಿಂಧೋಗಿ ಭಾಗದ ಸುಮಾರು 8 ಹಳ್ಳಿಗಳ 500 ಎಕರೆ ಜಮೀನು ನೀರಾವರಿಯಿಂದ ವಂಚಿತವಾಗಿದೆ ಮತ್ತು ಈ ಭಾಗದ ಜನರಿಗೆ ಕುಡಿಯುವ ನೀರಿನ ತೊಂದರೆಯಾಗಿದೆ ಎಂದು ಹೇಳಿದರು.

### ಜಾತಿ ಜನಗಣತಿಗೆ ನನ್ನ ವಿರೋಧವಿಲ್ಲ

ಬೆಳಗಾವಿ: ನಾನು ಜಾತಿ ಜನಗಣತಿಗೆ ಎಲ್ಲಿಯೂ ವಿರೋಧ ವ್ಯಕ್ತಪಡಿಸಿಲ್ಲ. ಜಾತಿ ಗಣತಿಯ ಸಮೀಕ್ಷೆ ವೈಜ್ಞಾನಿಕವಾಗಿ ಹಾಗೂ ವ್ಯವಸ್ಥಿತವಾಗಿ ನಡೆಯಬೇಕು ಎಂಬುದಷ್ಟೇ ನಮ್ಮ ಅಭಿಮತ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಿದರು.

ಸುವರ್ಣಸೌಧದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಶಿವಕುಮಾರ್, ಜಾತಿ ಗಣತಿ ಸಮೀಕ್ಷೆ ಸರಿಯಾಗಿ ನಡೆದಿಲ್ಲ ಎಂದು ನಮ್ಮ ಅನೇಕ ಶಾಸಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಮನೆ, ಮನೆಗೆ ತೆರಳಿ ಸಮೀಕ್ಷೆ ನಡೆಸಿಲ್ಲ ಎಂದು ದೂರುಗಳು ಬಂದಿವೆ. ಎಲ್ಲಾ ಸಮುದಾಯಗಳು ಅವರ ಜನಸಂಖ್ಯೆಗೆ ಅನುಗುಣವಾಗಿ ತಮ್ಮ ಹಕ್ಕನ್ನು ಪಡೆಯಬೇಕು ಎಂದರು.

## ಶೇ.80 ರಷ್ಟು ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ: ಗೃಹ ಸಚಿವ ಡಾ.ಜಿ.ಪರಮೇಶ್ವರ



**ಪ್ರಮುಖ ಮುಖ್ಯಾಂಶಗಳು**

- ಆಯವ್ಯಯದಲ್ಲಿ ಹೊಸ ಅಗ್ನಿಶಾಮಕ ಠಾಣೆಗೆ ಪ್ರಸ್ತಾವನೆ.
- ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನು
- ಗೃಹ ರಕ್ಷಕರ ಕರ್ತವ್ಯ ಭತ್ಯೆ ಪರಿಷ್ಕರಣೆ

**ಸುವರ್ಣಸೌಧ: ಬೆಳಗಾವಿ:** 2025ರ ವೇಳೆಗೆ ರಾಜ್ಯದ ಶೇ.80 ರಷ್ಟು ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ ಕಲ್ಪಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆಯ ಪ್ರಶೋತ್ನರ ಕಲಾಪದಲ್ಲಿ ಶಾಸಕರ ಪ್ರಶ್ನೆಗಳಿಗೆ ಉತ್ತರಿಸಿ ಅವರು ಮಾತನಾಡಿದರು.


ಈ ಹಿಂದೆ ಗೃಹ ಸಚಿವನಾಗಿದ್ದ ವೇಳೆ 2020ರ ವೇಳೆಗೆ ರಾಜ್ಯದಲ್ಲಿ 10 ರಿಂದ 15 ಸಾವಿರ ಪೊಲೀಸ್ ವಸತಿ ಗೃಹಗಳನ್ನು ನಿರ್ಮಿಸಲು ಯೋಜನೆ ರೂಪಿಸಿದ್ದೆ. ನಂತರ ಬಂದ ಸರ್ಕಾರವು ಯೋಜನೆಯನ್ನು ಮುಂದುವರಿಸಿದೆ. ಗ್ರಾಮೀಣ ಹಾಗೂ ಅವಶ್ಯಕತೆ ಇರುವ ಕಡೆ ವಸತಿ ಗೃಹಗಳನ್ನು ನಿರ್ಮಿಸಲಾಗುವುದು. ಈಗಾಗಲೇ ಶೇ.40 ರಷ್ಟು ಸಿಬ್ಬಂದಿಗೆ ವಸತಿ ಗೃಹಗಳನ್ನು ನಿರ್ಮಿಸಲಾಗಿದೆ ಎಂದರು.

ಹೊನ್ನಾಳಿ ತಾಲ್ಲೂಕು ನ್ಯಾಮಿತಿಯಲ್ಲಿ 12 ಹೊಸ ವಸತಿ ಗೃಹಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಪೊಲೀಸ್ ಠಾಣೆಗೆ 2.26 ಎಕರೆ ಜಮೀನು ನೀಡಿದ್ದ ದಿವಂಗತ ಹೆಚ್.ಬಸವರಾಜಪ್ಪನವರ ಪತ್ನಿ ಹಾಗೂ ಮಕ್ಕಳು ರೂ.45 ಲಕ್ಷ ಹೆಚ್ಚಿನ ಪರಿಹಾರ ಕೋರಿ ಉಚ್ಚ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಈಗಾಗಲೇ ಅವರಿಗೆ ರೂ.53.92 ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ. ನ್ಯಾಯಾಲಯದ ಆದೇಶ ಬಂದ ಕೂಡಲೇ ವಸತಿ ಗೃಹಗಳ ನಿರ್ಮಾಣ ಕಾರ್ಯ ಆರಂಭಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಶಾಸಕ ಶಾಂತನಗೌಡ ಡಿ.ಜಿ. ಚುಕ್ಕೆ ಗುರುತನ ಪ್ರಶ್ನೆ ಉತ್ತರಿಸಿದರು.

2ನೇ ಪುಟಕ್ಕೆ

## ಮೈಸೂರು ಕಾಗದ ಕಾರ್ಖಾನೆ ಆರಂಭಕ್ಕೆ ಸಕಾರಾತ್ಮಕ ಚಿಂತನೆ



**ಸುವರ್ಣಸೌಧ: ಬೆಳಗಾವಿ:** ಭದ್ರಾವತಿಯಲ್ಲಿರುವ ಮೈಸೂರು ಕಾಗದ ಕಾರ್ಖಾನೆಯ ಪುನರಾರಂಭಕ್ಕೆ ಸರ್ಕಾರವು ಸಕಾರಾತ್ಮಕವಾಗಿ ಚಿಂತನೆ ನಡೆಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯ ಎಸ್.ರುದ್ರೇಗೌಡ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಮೈಸೂರು ಕಾಗದ ಕಾರ್ಖಾನೆಯು ತೀವ್ರ ತರಹದ ಹಣಕಾಸಿನ ಸಮಸ್ಯೆಯನ್ನು ಎದುರಿಸುತ್ತಿದ್ದ ಕಾರಣ ಎಲ್ಲಾ ಉತ್ಪಾದನಾ ಘಟಕಗಳನ್ನು 21–11–2015 ರಿಂದ ಸ್ಥಗಿತಗೊಳಿಸಿದ್ದು, ಜೂನ್ 2023 ಅಂತ್ಯಕ್ಕೆ ಒಟ್ಟು ಸಂಚಿತ ನಷ್ಠ 1482 ಕೋಟಿ ರೂ ಆಗಿದೆ ಎಂದು ತಿಳಿಸಿದರು.

ಸರ್ಕಾರವು ಕಾರ್ಖಾನೆಯ ಪುನರುಜ್ಜಿವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮೆ? ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.

ಆರ್‌ಎಫ್ ಕ್ಯೂ ಅನ್ನು ಏಪ್ರಿಲ್ 2017,ಆಗಸ್ಟ್ 2018 ಹಾಗೂ ಮಾರ್ಚ್ 2019 ರಲ್ಲಿ ಪ್ರಕಟಿಸಲಾಗಿತ್ತು. ಆರ್‌ಎಫ್ ಕ್ಯೂಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ. ಆರ್‌ಎಫ್‌ಕ್ಯೂ ಅನ್ನು ಕಂಪನಿಯು ಮೊದಲೇ ಅಪ್‌ಲೋಡ್ ಮಾಡಲಾಗಿದ್ದು ಆರ್‌ಎಫ್‌ಕ್ಯೂಗಾಗಿ ಪ್ರಚಾರವನ್ನು ಮತ್ತು ಈಗಾಗಲೇ ವ್ಯಾಪಕ ನೀಡಲಾಗಿರುವುದರಿಂದ ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) ನೇರವಾಗಿ ದಿನಾಂಕ: 25.11.2020 ರಂದು ಅಪ್‌ಲೋಡ್ ಮಾಡಲಾಗಿದ್ದು, ಇ–ಟೆಂಡರ್ ತೆರೆದಾಗ ಯಾವುದೇ ಸ್ವೀಕೃತವಾಗಿರುವುದಿಲ್ಲ.

ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪೆನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸಿರುತ್ತಾರೆ. ಅದರಂತೆ, ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಮತ್ತು ಬಾಕಿ ಉಳಿದಿರುವ 1102 ಕೋಟಿಗಳ ಹೊಣೆಗಾರಿಕೆಗಳ ಕುರಿತು ಸರ್ಕಾರವು ತೀರ್ಮಾನ ತೆಗೆದು ಕೊಳ್ಳಬೇಕಾಗಿರುತ್ತದೆ.

ದಿನಾಂಕ: 07.09.2023ರಂದು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯದಂತೆ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 17–11–2023ರಂದು ಸಭೆ ನಡೆಸಲಾಗಿದ್ದು, ಅದರಂತೆ ಅರಣ್ಯ ಇಲಾಖೆಯ ತಜ್ಞರ ಸಮಿತಿಯು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ನೀಡುವ ಸಂಬಂಧ ಪರಿಶೀಲಿಸಿ ವರದಿ ನೀಡಬೇಕಾಗಿದೆ. ಕಂಪನಿಯ ಸಾಲಗಳು/ಬಾಕಿಗಳ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ.

ಈ ಕಾರ್ಖಾನೆಯ ಭೂಪ್ರದೇಶವನ್ನು ಮೈಸೂರು ಕಾಗದ ಕಾರ್ಖಾನೆಯು ಸಂರಕ್ಷಿಸಿದ್ದು, ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸುವುದರಿಂದ, ಅದರಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ತದನಂತರ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ತಿಳಿಸಿದರು.

## ಅವ್ಯವಸ್ಥೆ ಸರಿಪಡಿಸಿ ಆಸ್ಪತ್ರೆಗಳಿಗೆ ಜೀವ ರಕ್ಷಕ ಔಷಧಿ ಪೂರೈಸಲಾಗುವುದು: ಸಚಿವ ದಿನೇಶ ಗುಂಡೂರಾವ್

**ಸುವರ್ಣಸೌಧ: ಬೆಳಗಾವಿ:** ಸರ್ಕಾರಿ ಆಸ್ಪತ್ರೆಗಳಿಗೆ ಜೀವ ರಕ್ಷಕ ಔಷಧಿ ಪೂರೈಕೆಯಲ್ಲಿ ಆಗುವ ವಿಳಂಬವನ್ನು ತಪ್ಪಿಸಿ, ಶೀಘ್ರವಾಗಿ ಔಷಧಿಯ ಪೂರೈಕೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ ಗುಂಡೂರಾವ್ ಹೇಳಿದರು.

ವಿಧಾನ ಪರಿಷತನಲ್ಲಿ ಸದಸ್ಯೆ ಹೇಮಲತಾ ನಾಯಕ ಅವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯದ ಬಗ್ಗೆ ಮಾತನಾಡಿದ ಸಚಿವರು, ಆಸ್ಪತ್ರೆಗಳಲ್ಲಿ ನಿಗದಿತ ಸಮಯಕ್ಕೆ ಔಷಧಿ ಸಿಗುವುದಿಲ್ಲ ಎನ್ನುವುದು ಗಂಭೀರ ವಿಷಯಾಗಿದೆ. ಆಸ್ಪತ್ರೆಗಳಿಗೆ ಸಕಾಲಕ್ಕೆ ಔಷಧಿ ಪೂರೈಸಬೇಕಾಗಿರುವುದು ನಮ್ಮ ಮೂಲ ಜವಾಬ್ದಾರಿಯಾಗಿದೆ.

ಆಸ್ಪತ್ರೆಗಳಿಗೆ ಶೇ.35ರಷ್ಟು ಮಾತ್ರ ಔಷಧಿ ಪೂರೈಕೆಯಾಗುತ್ತಿದೆ. ಟೆಂಡರ್ ಮೂಲಕ ಔಷಧಿ ಖರೀದಿಸುವ ಪ್ರಕ್ರಿಯೆಯಲ್ಲಿ



ಸರಬರಾಜುದಾರರು ಭಾಗಿಯಾಗುತ್ತಿಲ್ಲ, ಈ ಪ್ರಕ್ರಿಯೆಯಲ್ಲಿ ಅವ್ಯವಸ್ಥೆ ಉಂಟಾಗಿದೆ ಎನ್ನಲಾಗುತ್ತಿದ್ದು ಈ ಅವ್ಯವಸ್ಥೆಯನ್ನು ಎರಡ್ಮೂರು ತಿಂಗಳೊಳಗೆ ಸರಿಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

ಆಸ್ಪತ್ರೆಗಳಲ್ಲಿ ಕೆಲವೊಂದು ಪ್ರಮುಖ ಔಷಧಿಗಳು ಸದಾಕಾಲ ಲಭ್ಯತೆಯಲ್ಲಿರುವಂತೆ ನೋಡಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ಕೆಲ ಪ್ರಮುಖ ಔಷಧಿಗಳನ್ನು ಖರೀದಿಸಲು ಈಗಾಗಲೇ ಸೂಚನೆ ನೀಡಲಾಗಿದೆ.

ಆಸ್ಪತ್ರೆಗಳಲ್ಲಿ ಔಷಧಿಯು ಸಾರ್ವಜನಿಕರಿಗೆ ಉಚಿತವಾಗಿ ಲಭ್ಯವಾಗಬೇಕು. ಔಷಧಿ ಪೂರೈಕೆ ಟೆಂಡರ್ ಪ್ರಕ್ರಿಯೆಯಲ್ಲಿ ಅರ್ಹ ಸರಬರಾಜುದಾರರು ಮುಕ್ತವಾಗಿ ಭಾಗಿಯಾಗಬೇಕು. ಸರಿಯಾದ ಸಮಯಕ್ಕೆ ಔಷದಿ ಸರಬರಾಜು ಆಗಬೇಕು ಎಂಬುದು ನಮ್ಮ ಉದ್ದೇಶವಾಗಿದ್ದು ಈ ನಿಟ್ಟಿನಲ್ಲಿ ಈಗಿರುವ ಅವ್ಯವಸ್ಥೆಯನ್ನು ಸರಿಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

## ವಿಪಕ್ಷದ ವಿರುದ್ಧ ಕೆಂಡಾಮಂಡಲವಾದ ಶಾಸಕ ಸವದಿ

ಬೆಳಗಾವಿ: ಶಿವಮೊಗ್ಗದವರು ಉತ್ತರ ಕರ್ನಾಟಕದ ವಿರೋಧಿಗಳು, ಬೆಳಗಾವಿಯ ಕಬ್ಬು ಬೆಳೆಗಾರರಿಗೆ ನೀವು ಅವಮಾನ ಮಾಡಿತ್ತಿದ್ದೀರಿ. ನೀವು ಹೊರಗೆ ಹೋದರೆ ನಿಮ್ಮನ್ನು ಕಬ್ಬಿನಿಂದಲೇ ಹೊಡೆದು ಹಾಕುತ್ತಾರೆ ಎಂದು ಬೆಳಗಾವಿ ವಿಧಾನಸಭೆ ಕಲಾಪದಲ್ಲಿ ಕಾಂಗ್ರೆಸ್ ಶಾಸಕ ಲಕ್ಷ್ಮಣ್ ಸವದಿ ವಿಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದರು.

ಅಧಿವೇಶನದಲ್ಲಿ ಕಬ್ಬು ಬೆಳೆಗಾರರ ಸಮಸ್ಯೆ ಕುರಿತು ಚರ್ಚೆ ಆರಂಭಿಸಿದಾಗ ಬಿಜೆಪಿ ಸದಸ್ಯರು ಅಡ್ಡಿಪಡಿಸಿದರು. ಸದನದ ಬಾವಿಗಿಳಿದು ಧರಣಿ ನಡೆಸುತ್ತಿದ್ದ ಬಿಜೆಪಿ ಶಾಸಕರ ಪೈಕಿ ಶಿವಮೊಗ್ಗ ನಗರ ಕ್ಷೇತ್ರದ ಸದಸ್ಯ ಚನ್ನಬಸಪ್ಪ ವಿರುದ್ಧ ಲಕ್ಷ್ಮಣ್ ಸವದಿ ಆಕ್ರೋಶ ವ್ಯಕ್ತಪಡಿಸಿದರು. ಶಿವಮೊಗ್ಗದವರು ಉತ್ತರ ಕರ್ನಾಟಕದ ವಿರೋಧಿಗಳು. ಬೆಳಗಾವಿ ಕಬ್ಬು ಬೆಳೆಗಾರರಿಗೆ ಅವಮಾನ ಮಾಡುತ್ತಿದ್ದೀರಿ. ನಿಮ್ಮನ್ನು ಕಬ್ಬಿನಿಂದಲೇ ಹೊಡೆದು ಹಾಕುತ್ತಾರೆ. ನಿಮಗೆ ಮಾನ–ಮಾರ್ಯದೆ ಇದೆಯಾ? ಎಂದು ಕೆಂಡಾಮಂಡಲವಾದರು.

ಮುಂದುವರೆದು, ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರಿಗೆ ಕೈ ಮುಗಿದು ಮಾತನಾಡಲು ಸಹಕರಿಸಬೇಕು ಎಂದು ಕೋರಿದರು. ಆದರೂ ಬಿಜೆಪಿ ಶಾಸಕರು ಅಡ್ಡಿಪಡಿಸಿದಾಗ ಕೋಪಗೊಂಡರು. ಈ ವೇಳೆ ಬಿಜೆಪಿಯ ಚನ್ನಬಸಪ್ಪ ಅವರು ಮತ್ತಷ್ಟು ಕೆಣಕಿದರು. ಈ ವೇಳೆ ಮತ್ತಷ್ಟು ಕೋಪ ಗೊಂಡ ಲಕ್ಷ್ಮಣ ಸವದಿ, ' ಶಿವಮೊಗ್ಗದ ಶಾಸಕರು ಹೆಂಗೆ ಕೂಗಾಡುತ್ತಾರೆ ನೋಡಿ. ಚಾವಿ (ಬೀಗ) ಕೊಟ್ಟು ಯಾರು ಕಳುಹಿಸಿದ್ದಾರೆ ಎಂಬುದು ಗೊತ್ತಿದೆ. ನಿಮ್ಮ ಜನ್ಮಕ್ಕೆ ನಾಚಿಗೆಯಾಗಬೇಕು. ನಿಮ್ಮನ್ನು ಕಬ್ಬಿನಿಂದಲೇ ರೈತರು ಹೊಡೆದುಹಾಕುತ್ತಾರೆ. ಶಿವಮೊಗ್ಗದವರು ಉತ್ತರ ಕರ್ನಾಟಕ ವಿರೋಧಿಗಳು ಎಂದು ಕಿಡಿಕಾರಿದರು.



ಸಭಾಧ್ಯಕ್ಷ ಯು ಟಿ ಖಾದರ್ ಸಮಾಧಾನ ಮಾಡಲು ಪ್ರಯತ್ನಿಸಿದರೂ, ಯಾವುದೇ ಪ್ರಯೋಜನವಾಗಲಿಲ್ಲ. ಚನ್ನಬಸಪ್ಪ ವಿರುದ್ಧ ಟೀಕಾಪ್ರಹಾರ ಮುಂದುವರಿಸಿದರು. 'ಹುಚ್ಚುನಾಯಿ ಕಡಿದಿದೆಯಾ? ಎಂದು ಕೂಗಾಡಿದರು. ಇದೇ ವೇಳೆ ಕೆಲವು ಸಕ್ಕರೆ ಕಾರ್ಖಾನೆ ಮಾಲೀಕರು ರೈತರಿಗೆ ಮೋಸ ಮಾಡುತ್ತಿದ್ದು, ಅವರು ಸರ್ಕಾರವನ್ನು ವಂಚಿಸಬಹುದು. ಆದರೆ, ದೇವರನ್ನಲ್ಲ. ಅವರಿಗೆ ಪಾಶ್ವವಾರ್ಯು ಆಗಲಿದೆ ಎಂದು ವಾಗ್ದಾಳಿ ನಡೆಸಿದರು.

ಕಬ್ಬಿನ ಮಾಲೀಕರ ವಿರುದ್ಧ ಕ್ರಮ: ಸಕ್ಕರೆ ಕಾರ್ಖಾನೆಗಳಲ್ಲಿ ರೈತರ ಕಬ್ಬಿನ ತೂಕದಲ್ಲಿನ ಮೋಸ ತಡೆಗೆ ತಪ್ಪಿತಸ್ಥ ಕಾರ್ಖಾನೆಗಳ ಮಾಲೀಕರ ವಿರುದ್ಧ ಯಾವುದೇ ಮುಲಾಜಿಲ್ಲದೇ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಭರವಸೆ ನೀಡಿದರು.

# ಧರ್ಮದಿಂದ ನಡೆದು, ಮಾನವೀಯ ನಡೆ ಅನುಸರಿಸಿದರೆ, ಉತ್ತಮ ಸಮಾಜ ನಿರ್ಮಾಣ ಸಾಧ್ಯ: ರಾಜ್ಯಪಾಲರು

ಬೆಳಗಾವಿ: ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಮಂಗಳವಾರ ಶ್ರೀ ಸಿದ್ಧಸೇನ್ ರಿಸರ್ಚ್ ಫೌಂಡೇಶನ್ ನಲ್ಲಿ ಆಯೋಜಿಸಲಾಗಿದ್ದ ಶ್ರೀ 1008ನೇ ಭಗವಾನ ಮಹಾವೀರ ತೀರ್ಥಂಕರ 2550 ನೇ ನಿರ್ವಾಣ ಮಹೋತ್ಸವ, ಮತ್ತು ಪೂಜ್ಯ ಆಚಾರ್ಯರತ್ನ ಶ್ರೀ 108 ಬಾಹುಬಲಿ ಮುನಿ ಮಹಾರಾಜರ 92ನೇ ಜನ್ಮದಿನದ ಆಚರಣೆ, ಮತ್ತು ಪರಮ ಪೂಜ್ಯ ಬಾಲಾಚಾರ್ಯ ರ ಶ್ರೀ 108 ಸಿದ್ಧಸೇನ ಮುನಿ ಮಹಾರಾಜರ 25 ನೇ ದೀಕ್ಷಾ ಮಹೋತ್ಸವದಲ್ಲಿ ಭಾಗಿಯಾದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಜೈನ ಧರ್ಮದ 24 ನೇ ತೀರ್ಥಂಕರರಾದ ಮಹಾವೀರ ಸ್ವಾಮಿಗಳು ಅಹಿಂಸೆಯ ಮೂರ್ತರೂಪವಾಗಿದ್ದರು, ಅವರ ಜೀವನವು ತ್ಯಾಗ ಮತ್ತು ತಪಸ್ಸಿನಿಂದ ತುಂಬಿತ್ತು. ತ್ಯಾಗ ಮತ್ತು ಸಂಯಮ, ಪ್ರೀತಿ ಮತ್ತು ಕರುಣೆ, ಭಕ್ತಿ ಮತ್ತು ಸದ್ಗುಣ ಅವರ ಜೀವನಕ್ಕೆ ಆಧಾರವಾಗಿತ್ತು. ಜೈನ ಧರ್ಮದ ಕೊನೆಯ ತೀರ್ಥಂಕರರಾದ ಶ್ರೀ ಮಹಾವೀರ ಸ್ವಾಮಿಗಳ "ಬದುಕು ಮತ್ತು ಬದುಕಲು ಬಿಡಿ" ಎಂಬ ಅಮರ ಸಂದೇಶಕ್ಕೆ ಜೈನ ಸಮಾಜವು ಮಾನವ ಸೇವೆಯೊಂದಿಗೆ ಅನೇಕ ಸಾಮಾಜಿಕ, ಧಾರ್ಮಿಕ, ಸಾಂಸ್ಕೃತಿಕ, ನೈತಿಕ ಮತ್ತು ದತ್ತಿ ಕಾರ್ಯಗಳ ಮೂಲಕ ಅರ್ಥವನ್ನು ನೀಡುತ್ತಿದೆ ಎಂದು ಶ್ಲಾಘಿಸಿದರು.

ಇಡೀ ವಿಶ್ವದ ಗಮನ ಸೆಳೆದು ಸಾಮಾಜಿಕ, ಧಾರ್ಮಿಕ, ಆಧ್ಯಾತ್ಮಿಕ, ಶೈಕ್ಷಣಿಕ, ವೈದ್ಯಕೀಯ ಹೀಗೆ ನಾನಾ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸುತ್ತಿರುವ ಜೈನ ಸಮುದಾಯದ ಪರಮಪೂಜ್ಯ ಬಾಲಾಚಾರ್ಯ ಶ್ರೀ 108 ಸಿದ್ಧಸೇನ್ ಜಿ ಗುರುದೇವ್ ಅವರು ದೀಕ್ಷೆ ಸ್ವೀಕರಿಸಿ 25 ವರ್ಷ ಪೂರೈಸುತ್ತಿದ್ದು, ಅವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತಿದ್ದೇನೆ. ಈ 25 ವರ್ಷಗಳಲ್ಲಿ, ಅನೇಕ ಯಾತ್ರಾಸ್ಥಳಗಳನ್ನು ಜೀರ್ಣೋದ್ಧಾರ ಮಾಡಲಾಗಿದೆ,

ಅನೇಕ ದೇವಾಲಯಗಳನ್ನು ನಿರ್ಮಿಸಲಾಗಿದೆ ಮತ್ತು ಅನೇಕ ಪಂಚಕಲ್ಯಾಣ ಪ್ರತಿಷ್ಠಾ



ಮಹಾಶತ್ವಗಳನ್ನು ಅತ್ಯಂತ ಉತ್ಸಾಹದಿಂದ ಪೂರ್ಣಗೊಳಿಸಲಾಗಿದೆ.

ಶ್ರೀ ಸಿದ್ದಸೇನ್ ಮಹಾರಾಜ್ ಜಿ ಅವರು 2016-17 ರಲ್ಲಿ ಆಧ್ಯಾತ್ಮಿಕ ಸಂಶೋಧನಾ ಪ್ರತಿಷ್ಠಾನವನ್ನು ಸ್ಥಾಪಿಸಿದರು ಮತ್ತು ಈ ಟ್ರಸ್ಟ್ ಮೂಲಕ ಬೆಳಗಾವಿ ಮಹಾನಗರದ ಹಲ್ಗಾ ಗ್ರಾಮದಲ್ಲಿ ಮುನಿ ನಿವಾಸವನ್ನು ನಿರ್ಮಿಸಲಾಗಿದೆ, ಮುಂದಿನ ದಿನಗಳಲ್ಲಿ ಬೃಹತ್ ದೇವಾಲಯ, ಅನ್ನಸಂತರ್ಪಣೆ, ಗುರುಕುಲ, ವೃದ್ಧಾಶ್ರಮ, ಗೋಶಾಲೆ, ಉಚಿತ ಆಸ್ಪತ್ರೆಯಂತಹ ಅನೇಕ ಜನಕಲ್ಯಾಣ ಕಾರ್ಯಗಳನ್ನು ಪೂರ್ಣಗೊಳಿಸುವುದು ಗೌರವಾನ್ವಿತ ಗುರುದೇವರ ಗುರಿಯಾಗಿದೆ ಎಂದು ತಿಳಿಸಿದರು.

ಧರ್ಮದಿಂದ ನಡೆದಾಗ ಯುವ ಪೀಳಿಗೆಯು ಮಾನವೀಯ, ಸದ್ಗುಣ, ಉತ್ತಮ ಚಿಂತನೆಗಳು ಮತ್ತು ಪರೋಪಕಾರಿ ಶಿಕ್ಷಣದ ಜೊತೆಗೆ ಧರ್ಮ, ಸಂಸ್ಕೃತಿ ಮತ್ತು ಮೌಲ್ಯಗಳ ಜ್ಞಾನವನ್ನು ಪಡೆಯುತ್ತದೆ.

ಧರ್ಮದಿಂದ ಜಗತ್ತಿನಲ್ಲಿ ನಾವು ರಕ್ಷಿಸಲ್ಪಟ್ಟಿದ್ದೇವೆ, ಅದಕ್ಕಾಗಿಯೇ ಧರ್ಮ ರಕ್ಷತಿ ರಕ್ಷಿತಾ ಎಂದು ಹೇಳಲಾಗುತ್ತದೆ, ಧರ್ಮದ ಸಂಪ್ರದಾಯವು ಧಾರ್ಮಿಕ ಗುರುಗಳಿಂದ ಮಾತ್ರ ಮುಂದುವರಿಯುತ್ತದೆ.

ಧರ್ಮದ ನಿಯಮಗಳನ್ನು ಅನುಸರಿಸಿ ಮಾನವ ಹೃದಯವು ಶುದ್ಧವಾದಾಗ, ಕರುಣೆಯು ಹುಟ್ಟುತ್ತದೆ. ಸಹಾನುಭೂತಿಯಿಂದಾಗಿ, ಕರುಣೆ ಮತ್ತು ಕ್ಷಮೆಯ ಭಾವನೆಗಳು ಜಾಗೃತಗೊಳ್ಳುತ್ತವೆ. ಈ ಎರಡು ಗುಣಗಳಿಂದಾಗಿ, ಮಾನವರು ಮನುಷ್ಯರನ್ನು ಪ್ರೀತಿಸಲು ಪ್ರಾರಂಭಿಸುತ್ತಾರೆ ಮತ್ತು ಇತರರನ್ನು ದುಃಖದಿಂದ ರಕ್ಷಿಸಲು ಪ್ರಯತ್ನಿಸುತ್ತಾರೆ ಎಂದು ಹೇಳಿದರು.

ಸಮಾಜವನ್ನು ಸಂಘಟಿತವಾಗಿಡುವಲ್ಲಿ ಧರ್ಮವು ಪ್ರಮುಖ ಪಾತ್ರ ವಹಿಸುತ್ತದೆ. ಧರ್ಮವು ಯಾವುದೇ ವ್ಯಕ್ತಿಯ ಮೇಲೆ ಧಾರ್ಮಿಕವಾಗಿ, ಸಾಮಾಜಿಕವಾಗಿ ಮತ್ತು ಆಧ್ಯಾತ್ಮಿಕವಾಗಿ ಪರಿಣಾಮ ಬೀರುತ್ತದೆ ಮತ್ತು ಅದೇ ಸಮಯದಲ್ಲಿ ಧರ್ಮವು ಸಮಾಜದಲ್ಲಿ ಏಕತೆಯ ಭಾವನೆಯನ್ನು ನೀಡುತ್ತದೆ.

ಇತ್ತೀಚಿನ ದಿನಗಳಲ್ಲಿ ಜಾಗತಿಕ ತಾಪಮಾನ ಹೆಚ್ಚಾಗುತ್ತಿದೆ. ಮುಂದಿನ ಪೀಳಿಗೆಗೆ ಉತ್ತಮ ನೈಸರ್ಗಿಕ ನಿರ್ಮಾಣ ಮಾಡಬೇಕಾದರೆ, ಪರಿಸರ ಸಂರಕ್ಷಣೆ ಅತ್ಯಗತ್ಯ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಕೈಜೋಡಿಸಿ, ನೈಸರ್ಗಿಕ ಸಂಪನ್ಮೂಲ ಹಾಗೂ ಪರಿಸರ ಸಂರಕ್ಷಣೆಗೆ ಒತ್ತು ನೀಡಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಪೂಜ್ಯ ಶ್ರೀ 108 ಸಿದ್ಧಸೇನ್ ಮುನಿ ಮಹಾರಾಜ್ , ಅಹಿಂಸಾ ವಿಶ್ವಭಾರತಿಯ ಸಂಸ್ಥಾಪಕರಾದ ಶ್ರೀ ಆಚಾರ್ಯ ಡಾ. ಲೋಕೇಶ್ ಮುನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಕಲಬುರಗಿ ಮೆಗಾ ಜವಳಿ ಪಾರ್ಕ್ ಗೆ 1000 ಎಕರೆ ಜಮೀನು: ಸಚಿವ ಶಿವಾನಂದ ಎಸ್.ಪಾಟೀಲ್

**ಸುವರ್ಣಸೌಧ: ಬೆಳಗಾವಿ:** ರಾಜ್ಯ ಸರ್ಕಾರವು ಕಲಬರುಗಿಯಲ್ಲಿ ಪಿಎಂ ಮಿತ್ರ ಪಾರ್ಕ್ ಯೋಜನೆಯಡಿ ಸ್ಥಾಪಿಸಲು ರಚನೆಯಾಗಲಿರುವ ವಿಶೇಷ ಉದ್ದೇಶಿತ ವಾಹಕ (Special Purpose Vehicle) ಗೆ ಸಾಂಕೇತಿಕ ದರದಲ್ಲಿ 1000 ಎಕರೆ ಜಮೀನನ್ನು (99 ವರ್ಷಗಳ ಅವಧಿಗೆ ಪ್ರತಿ ಎಕರೆಗೆ ರೂ.1 ರಂತೆ) ಕ್ಯಾಬಿನೆಟ್ ಅನುಮೋದನೆಯೊಂದಿಗೆ ಹಸ್ತಾಂತರಿಸಲಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯ ಎಸ್.ತಿಪ್ಪೇಸ್ವಾಮಿ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ಕೇಂದ್ರ ಸರ್ಕಾರವು ಅಂತರ ರಾಷ್ಟ್ರೀಯ ಮಟ್ಟದ ಜವಳಿ ಮತ್ತು ಸಿದ್ಧ ಉಡುಪಿನ ಪಾರ್ಕ್ ನಿರ್ಮಾಣಕ್ಕೆ PM- MITRA Park ಯೋಜನೆಯಡಿ ಕಲಬುರಗಿ ಜಿಲ್ಲೆಯ ಕಲಬುರಗಿ ತಾಲ್ಲೂಕಿನ ಕಿರಣಗಿ, ನದಿಸಿನ್ನೂರು ಹಾಗೂ ಫಿರೋಜಾಬಾದ್ ಗ್ರಾಮಗಳ ವಿವಿಧ ಸರ್ವೆ



ನಂಬರ್‌ಗಳಡಿ 1000 ಎಕರೆ ಪ್ರದೇಶದಲ್ಲಿ ಸ್ಥಾಪಿಸಲು ಅನುಮೋದನೆ ನೀಡಿರುತ್ತದೆ.

ರಾಜ್ಯದಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ ನಿರ್ಮಿಸುವ PM- MITRA Park , ಎಲ್ಲಾ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸ್ಥಳದಲ್ಲಿ ಸ್ಥಾಪಿಸುವ ಮೂಲಕ ಲಾಜಿಸ್ಟಿಕ್ಸ್ ವೆಚ್ಚವನ್ನು ಕಡಿಮೆ ಮಾಡಿ, ಹೂಡಿಕೆಯನ್ನು ಆಕರ್ಷಿಸಿ, ಉತ್ಪಾದನೆ, ಉದ್ಯೋಗ ಮತ್ತು ರಫ್ತು ಸಾಮರ್ಥ್ಯವನ್ನು ಹೆಚ್ಚಿಸುವುದು. ಜವಳಿ ಉದ್ಯಮದ ಎಲ್ಲಾ ಮೌಲ್ಯ ಸರಪಳಿಯನ್ನೊಳಗೊಂಡ ಸಮಗ್ರ ದೊಡ್ಡ ಪ್ರಮಾಣದ ಮತ್ತು ಆಧುನಿಕ ಕೈಗಾರಿಕಾ ಮೂಲ ಸೌಕರ್ಯ ಸೌಲಭ್ಯವನ್ನು ಅಭಿವೃದ್ಧಿಪಡಿಸುವುದು.

ಜಾಗತಿಕ ಜವಳಿ ಮಾರುಕಟ್ಟೆಯಲ್ಲಿ ಕರ್ನಾಟಕವನ್ನು ಸ್ಪರ್ಧಾತ್ಮಕ ರಾಜ್ಯವನ್ನಾಗಿಸಲು ಹೂಡಿಕೆಗಳನ್ನು ಆಕರ್ಷಿಸಿ ಹೆಚ್ಚಿನ ಉದ್ಯೋಗಗಳನ್ನು ಸೃಜಿಸುವ ಗುರಿ ಹೊಂದಿದೆ. ಸುಸ್ಥಿರ ಕೈಗಾರೀಕರಣದ ಅನ್ವೇಷಣೆ ಹಾಗೂ ಉತ್ತೇಜನೆ, ನಾವಿನ್ಯ ಅನ್ವೇಷಣೆ, ಸ್ಥಿತಿಸ್ಥಾಪಕ ಸೌಕರ್ಯವನ್ನು ನಿರ್ಮಿಸುವವ ಧ್ಯೇಯೋದೇಶಗಳನ್ನು ಒಳಗೊಂಡಿದೆ.

ಈ ಮೆಗಾ ಪಾರ್ಕ್ ಸ್ಥಾಪಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜಂಟಿ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ.

ಅಲ್ಲದೇ ಸಾರ್ವಜನಿಕ-ಖಾಸಗಿಯವರ ಸಹಭಾಗಿತ್ವದಲ್ಲಿ ಉಡುಪಿ ಜಿಲ್ಲೆಯ ಕಾರ್ಕಳ, ಹಾವೇರಿ ಜಿಲ್ಲೆಯ ರಾಣೆಬೆನ್ನೂರು, ರಾಯಚೂರು ಜಿಲ್ಲೆಯ ರಾಯಚೂರು, ಧಾರವಾಡ ಜಿಲ್ಲೆಯ ನವಲಗುಂದ, ಬಾಗಲಕೋಟೆ ಜಿಲ್ಲೆಯ ಗುಳೇದಗುಡ್ಡ ಮತ್ತು ಚಿತ್ರದುರ್ಗ ಜಿಲ್ಲೆಯ ಕೊಂಡ್ಲಹಳ್ಳಿ ಈ ಭಾಗಗಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಉದ್ದೇಶಿಸಲಾಗಿರುತ್ತದೆ.

ಖಾಸಗಿ ಒಡೆತನದಲ್ಲಿ ಬಳ್ಳಾರಿಯಲ್ಲಿ ಜೀನ್ಸ್ ಮತ್ತು ಉಡುಪುಗಳನ್ನು ಉತ್ತೇಜಿಸಲು ಟೆಕ್ಸ್‌ಟೈಲ್ ಪಾರ್ಕ್ ಅನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

PM- MITRA Park ಯೋಜನೆಯಡಿ ನಿರ್ಮಿತವಾಗಲಿರುವ ಪಾರ್ಕ್ನ್ನು 2 ಹಂತಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೇಂದ್ರ ಸರ್ಕಾರವು 500 ಕೋಟಿಗಳ ಅನುದಾನ ಒದಗಿಸಲಿದೆ.

ವಿವರಗಳನ್ನು ಅನುಬಂಧ-3 ರಲ್ಲಿ ಒದಗಿಸಿದೆ. ರಾಜ್ಯ ಸರ್ಕಾರವು ಸದರಿ ಪಾರ್ಕ್‌ನಲ್ಲಿ ಸ್ಥಾಪನೆಯಾಗಲಿರುವ ಜವಳಿ ಘಟಕಗಳಿಗೆ ರಿಯಾಯಿತಿ ದರದಲ್ಲಿ ವಿದ್ಯುತ್ ಹಾಗೂ ನೀರನ್ನು ಸರಬರಾಜು ಮಾಡಲಿದೆ ಎಂದು ತಿಳಿಸಿದರು.

# ಸಕ್ಕರೆ ಕಾರ್ಖಾನೆಗಳಲ್ಲಿ ತೂಕದ ಯಂತ್ರ ಡಿಜಿಟಲೀಕರಣಕ್ಕೆ ಸೂಚನೆ: ಸಚಿವ ಕೆ.ಎಚ್.ಮುನಿಪ್ಪ

**ಸುವರ್ಣಸೌಧ: ಬೆಳಗಾವಿ:** ಕಬ್ಬಿನ ತೂಕದಲ್ಲಿ ಆಗುತ್ತಿರುವ ಮೋಸವನ್ನು ನಿಯಂತ್ರಿಸಲು ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿನ ತೂಕದ ಯಂತ್ರಗಳ ಡಿಜಿಟಲೀಕರಣಕ್ಕೆ ಸರ್ಕಾರ ಸೂಚನೇ ನೀಡಿದ್ದು, ಈ ಸಂಬಂಧ ಕಾರ್ಖಾನೆಗಳ ಮಾಲಿಕರಿಗೆ ಹದಿನೈದು ದಿನಗಳ ಗಡುವು ನೀಡಲಾಗಿದೆ ಎಂದು ಆಹಾರ, ನಾಗರಿಕ ಪೂರೈಕೆ ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಕೆ.ಎಚ್.ಮುನಿಯಪ್ಪ ತಿಳಿಸಿದರು.



ಕೊಠಡಿ ಸಂಖ್ಯೆ 354ರಲ್ಲಿ ಮಂಗಳವಾರ ಸಚಿವ ಶಿವಾನಂದ ಪಾಟೀಲ, ಶಾಸಕ ಲಕ್ಷ್ಮಣ ಸವದಿ ಸೇರಿದಂತೆ ಕಬ್ಬು ಬೆಳೆಯುವ ಪ್ರದೇಶಗಳ ವ್ಯಾಪ್ತಿಯ ಜನಪ್ರತಿನಿಧಿಗಳು, ಕಾನೂನು ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಪ್ರಸಕ್ತ ಹಂಗಾಮಿನಲ್ಲಿ 78 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುತ್ತಿವೆ. ಇದರಲ್ಲಿ 24 ಮಾತ್ರ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಿಕೊಂಡಿದ್ದು, ಉಳಿದ 54 ಕಾರ್ಖಾನೆಗಳು ಮುಂದಿನ ಹದಿನೈದು ದಿನಗಳಲ್ಲಿ ಡಿಜಿಟಲ್‌ಗೆ ಪರಿವರ್ತನೆ ಆಗಬೇಕು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ರೈತರು, ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಯಾವುದೇ ಕಾರಣಕ್ಕೂ ಮೋಸ ಆಗಬಾರದು. ರೈತರ ಗದ್ದೆಗಳಿಂದ ಲಾರಿಯಲ್ಲಿ ಎಷ್ಟು ಕಬ್ಬು ಬಂದಿರುತ್ತದೆಯೋ ಅಷ್ಟೇ ತೂಕ ಕಾರ್ಖಾನೆಗಳಲ್ಲಿ ತೂಕ ಮಾಡಿದಾಗಲೂ ಬರಬೇಕು. ಸರಿಯಾಗಿ ತೂಕ ಮಾಡದಿದ್ದರೆ, ಕಠಿಣ ಕ್ರಮ ಕೈಗೊಳ್ಳುವುದು ಅನಿವಾರ್ಯ ಆಗಲಿದೆ ಎಂದು ಎಚ್ಚರಿಸಿದರು.

ಡಿಜಿಟಲ್ ತೂಕ ಯಂತ್ರಗಳ ಅಳವಡಿಕೆಗೆ ಸಂಬಂಧಿಸಿದಂತೆ ಬೆಳಗಾವಿ ಮತ್ತು ಕಲಬುರಗಿ ಕಂದಾಯ ವಿಭಾಗಗಳ ಮಾಪನಶಾಸ್ತ್ರ ಇಲಾಖೆಯ ಜಂಟಿ ನಿರ್ದೇಶಕರು, ಉಪನಿರ್ದೇಶಕರು, ನಿಯಂತ್ರಕರು ಸೇರಿದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದೂ ಹೇಳಿದರು.

ಪ್ರಸ್ತುತ 5 ಕೆಜಿ ಅಕ್ಕಿ ಬದಲಿಗೆ ಗ್ರಾಹಕರಿಗೆ ನಗದು ನೀಡಲಾಗುತ್ತಿದೆ. ಹಲವು ಪ್ರಯತ್ನಗಳ ನಂತರವೂ ಅಕ್ಕಿ ದೊರೆಯದ ಕಾರಣ ಹಣ ನೀಡಲಾಗುತ್ತಿದೆ.

ಆಂಧ್ರಪ್ರದೇಶ ಮತ್ತು ತೆಲಂಗಾಣದೊಂದಿಗೆ ಮತ್ತೊಮ್ಮೆ ಮಾತುಕತೆ ನಡೆಸಿ, ಅಕ್ಕಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

# ಅವೈಜ್ಞಾನಿಕ ರಸ್ತೆ ವಿಭಜಕ ಕುರಿತು ಸದನದಲ್ಲಿ ಚರ್ಚೆ: ತೆರವಿಗೆ ಶಾಸಕ ವೀರೇಂದ್ರ ಪಪ್ಪಿ ಒತ್ತಾಯ



**ಸುವರ್ಣಸೌಧ: ಬೆಳಗಾವಿ:** ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ ನಿರ್ಮಿಸಲಾಗಿರುವ ಅವೈಜ್ಞಾನಿಕ ರಸ್ತೆ ವಿಭಜಕಗಳ ಕುರಿತು ಚರ್ಚೆ ನಡೆಯಿತು.

ಮಂಗಳವಾರದ ವಿಧಾನ ಸಭಾ ಕಲಾಪದಲ್ಲಿ ಶಾಸಕ ವೀರೇಂದ್ರ ಪಪ್ಪಿ ಈ ಕುರಿತು ಪ್ರಶ್ನಿಸಿ, ಸರ್ಕಾರದ ಗಮನ ಸೆಳೆದರು. ಐತಿಹಾಸಿಕವಾಗಿರುವ ಚಿತ್ರದುರ್ಗ ನಗರದಲ್ಲಿ ಮೊದಲಿನಿಂದಲೂ ಚಿಕ್ಕ ರಸ್ತೆಗಳು ಇವೆ. ನಗರದ ಮುಖ್ಯ ರಸ್ತೆ ಕೇವಲ 40 ಅಡಿ ಅಗಲವಿದೆ. ಇದರ ಮಧ್ಯ 5 ಎತ್ತರ ಹಾಗೂ 4 ಅಡಿ ಅಗಲದ ರಸ್ತೆ ವಿಭಜಕಗಳನ್ನು ನಿರ್ಮಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರು, ಪಾದಚಾರಿಗಳು, ವ್ಯಾಪಾರಿಗಳು ಬವಣೆ ಪಡುವಂತೆಯಾಗಿದೆ. ರಸ್ತೆ ಅಪಘಾತಗಳು ಹೆಚ್ಚಾಗುತ್ತಿವೆ ಎಂದರು.

ಕೆ.ಎಸ್.ಆರ್.ಟಿ. ಬಸ್ ನಿಲ್ದಾಣದಿಂದ ಗಾಂಧಿ ವೃತ್ತ ಸಂಪರ್ಕಿಸುವ ರಸ್ತೆ ಕಳೆದ 35 ವರ್ಷಗಳಿಂದ ಏಕಮುಖ ಸಂಚಾರದ ರಸ್ತೆಯಾಗಿದೆ. ಕಿರಿದಾದ ಏಕಮುಖ ರಸ್ತೆಯಲ್ಲೂ ದೊಡ್ಡ ರಸ್ತೆ ವಿಭಜಕಗಳನ್ನು ನಿರ್ಮಿಸಿರುವುದರಿಂದ ಕೇವಲ 10 ರಿಂದ 12 ಅಡಿ ರಸ್ತೆಗಳು ನಿರ್ಮಾಣವಾಗಿ, ಬಸ್ ಸೇರಿದಂತೆ ಇತರೆ ಭಾರಿ ವಾಹನಗಳು ಸಂಚಾರಕ್ಕೆ ತೊಂದರೆಯಾಗಿದೆ. ಇಲ್ಲಿ ಸಂಚರಿಸುವ ಪಾದಚಾರಿಗಳಿಗೆ ಕಷ್ಟವಾಗಿದೆ. ನಗರವಾಸಿಗಳು ಹಾಗೂ ನಗರಕ್ಕೆ ಆಗಮಿಸುವ ಜನರು ಸಹ ರಸ್ತೆ ವಿಭಜಕಗಳ ತೆರವಿಗೆ ಆಗ್ರಹಿಸುತ್ತಿದ್ದಾರೆ. ವೈಯಕ್ತಿಕವಾಗಿ ಸ್ವತಃ ರಸ್ತೆ ವಿಭಜಕಗಳ ಪರೀಶಲನೆ ನೆಡೆಸಿದ್ದೇನೆ. ತುರ್ತಾಗಿ ರಸ್ತೆ ವಿಭಜಕಗಳನ್ನು ತೆರವು ಆಗಬೇಕಿದೆ ಎಂದು ಸರ್ಕಾರವನ್ನು ಒತ್ತಾಯಿಸಿದರು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಪರವಾಗಿ ಸದನದಲ್ಲಿ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ, ಅವೈಜ್ಞಾನಿಕ ರಸೆ ವಿಭಜಕ ನಿರ್ಮಿಸಿದ ಗುತ್ತಿದಾರ ಬಿಲ್‌ಗಳನ್ನು ಸರ್ಕಾರ ಈಗಾಗಲೇ ತಡೆಹಿಡಿದೆ. ವಿಭಜಕಗಳ ತೆರವಿನ ಕುರಿತು ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಸಚಿವರ ಗಮನಕ್ಕೆ ತರುವುದಾಗಿ ಹೇಳಿದರು.

# ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ 'ಯುವನಿಧಿ' ಯೋಜನೆ ಜಾರಿಗೆ ಮುಹೂರ್ತ ಫಿಕ್ಸ್

ಬೆಳಗಾವಿ: ರಾಜ್ಯ ಸರ್ಕಾರದ ಮತ್ತೊಂದು ಮಹತ್ವಾಕಾಂಕ್ಷಿ ಗ್ಯಾರಂಟಿ 'ಯುವನಿಧಿ' ಯೋಜನೆ (Yuva Nidhi Scheme) ಜಾರಿಗೆಗೆ ಸರ್ಕಾರ ಮುಹೂರ್ತ ಫಿಕ್ಸ್ ಮಾಡಿದೆ. ಇದೇ ಡಿಸೆಂಬರ್ 21ರಿಂದ ಯುವನಿಧಿ ಯೋಜನೆಗೆ ನೋಂದಣಿ ಪ್ರಕ್ರಿಯೆ ಆರಂಭವಾಗಲಿದ್ದು, ಮುಂದಿನ ವರ್ಷ ಅಂದರೆ 2024ರ ಜನವರಿಯಲ್ಲಿ ಯುವನಿಧಿ ಯೋಜನೆಗೆ ಅಧಿಕೃತ ಚಾಲನೆ ಸಿಗಲಿದೆ. ಈ ಬಗ್ಗೆ ಉನ್ನತ ಶಿಕ್ಷಣ ಖಾತೆ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಮಾಹಿತಿ ನೀಡಿದ್ದಾರೆ.




ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಶರಣಪ್ರಕಾಶ್ ಪಾಟೀಲ್, ರಾಜ್ಯ ಸರ್ಕಾರದ ಮತ್ತೊಂದು ಮಹತ್ವಾಕಾಂಕ್ಷಿ ಗ್ಯಾರಂಟಿ 'ಯುವನಿಧಿ' ಯೋಜನೆಗೆ ಇದೇ ಡಿಸೆಂಬರ್21 ರಿಂದ ನೋಂದಣಿ ಪ್ರಕ್ರಿಯೆ ಆರಂಭವಾಗಲಿದ್ದು ಜನವರಿಯಲ್ಲಿ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಲಾಗುವುದು.

ನಾಡಿನ ಯುವಜನತೆಗೆ ಬೆನ್ನೆಲುಬಾಗಲಿರುವ ಈ ಯೋಜನೆಯಿಂದ ಸುಮಾರು 5 ಲಕ್ಷ ಪದವೀಧರರ ಖಾತೆಗೆ ನೇರವಾಗಿ ಹಣ ತಲುಪಲಿದೆ ಎಂದು ಎಕ್ಸ್(ಟ್ವಿಟ್ಟರ್) ಬರೆದುಕೊಂಡಿದ್ದಾರೆ.

ಸಚಿವರು ಬರೆದುಕೊಂಡಿರುವುದು ಹೀಗಿದೆ: ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಚುನಾವಣೆಗೂ ಮುನ್ನವೇ ಪ್ರಮುಖವಾಗಿ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಭರವಸೆಯನ್ನು ನೀಡಿತ್ತು.

ಈಗ ಚುನಾವಣೆಯಲ್ಲಿ ಗೆದ್ದು ಗದ್ದುಗೆಯನ್ನು ಪಡೆದ ಬಳಿಕ ಈ ಐದು ಯೋಜನೆಗಳನ್ನು ಜಾರಿ ಮಾಡುತ್ತಿದೆ. ಗೃಹ ಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹ ಲಕ್ಷ್ಮೀ ಯೋಜನೆಗಳನ್ನು ಈಗಾಗಲೇ ಜಾರಿಗೆ ಬಂದಿವೆ.

ಇದೀಗ ಬಾಕಿ ಉಳಿದಿದ್ದ ಯುವ ನಿಧಿ ಯೋಜನೆಗೆ ಜನವರಿಯಲ್ಲಿ ಚಾಲನೆ ಸಿಗಲಿದ್ದು, ಇದೇ ಡಿಸೆಂಬರ್ (2023) 21ರಿಂದ ಅರ್ಹ ಅಭ್ಯರ್ಥಿಗಳು ನೋಂದಾಣಿ ಪ್ರಕ್ರಿಯೆ ಆರಂಭವಾಗಲಿದೆ.

**ಯಾರಿಗೆ ಎಷ್ಟು ಹಣ?**

ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ 3000 ರೂ. ನಿಗದಿ ಮಾಡಿದ್ದರೆ, ಡಿಪ್ಲೊಮ ಪಾಸ್ ನಿರುದ್ಯೋಗಿಗಳಿಗೆ ಮಾಸಿಕ 1500 ರೂ. ಸಿಗಲಿದೆ.

ಕರ್ನಾಟಕ ಸರ್ಕಾರದ ಯುವ ನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆಯನ್ನು 2 ವರ್ಷಗಳ ಅವಧಿಗೆ ನಿರುದ್ಯೋಗಿ ಯುವಕರಿಗೆ ಮಾತ್ರ ನೀಡಲಾಗುತ್ತದೆ.

ಫಲಾನುಭವಿಯು 2 ವರ್ಷಗಳ ನಂತರ ಅಥವಾ 2 ವರ್ಷಗಳ ಅವಧಿಯಲ್ಲಿ ಉದ್ಯೋಗವನ್ನು ಕಂಡುಕೊಂಡರೆ ನಿರುದ್ಯೋಗ ಭತ್ಯೆಯನ್ನು ತಕ್ಷಣವೇ ನಿಲ್ಲಿಸಲಾಗುತ್ತದೆ.

**ಈ ಯೋಜನೆಗೆ ಯಾರೆಲ್ಲಾ ಅರ್ಹರು?**

ಅರ್ಜಿದಾರರು ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.

ಅರ್ಜಿದಾರರು ಪದವೀಧರರಾಗಿರಬೇಕು ಅಥವಾ ಡಿಪ್ಲೊಮಾ ಹೊಂದಿರುವವರಾಗಿರಬೇಕು.

ಅರ್ಜಿದಾರರು 2022-2023 ರಲ್ಲಿ ಅವನ / ಅವಳ ಪದವಿ ಅಥವಾ ಡಿಪ್ಲೊಮಾದಲ್ಲಿ ಉತ್ತೀರ್ಣರಾಗಿರಬೇಕು.


ಅರ್ಜಿದಾರರು ಪದವಿ ಅಥವಾ ಡಿಪ್ಲೊಮಾ ತೇರ್ಗಡೆಯಾದ ದಿನಾಂಕದ ನಂತರ ಕನಿಷ್ಠ 180 ದಿನಗಳವರೆಗೆ ನಿರುದ್ಯೋಗಿಯಾಗಿರಬೇಕು.

# ಶಾಸಕ ಅಭಯ ಪಾಟೀಲ ವಿರುದ್ಧ ಸಿಡಿದ್ದೆದ್ದ ಖಾದರವಾಡಿ ಗ್ರಾಮಸ್ಥರು

ಬೆಳಗಾವಿ: ಖಾದರವಾಡಿಯ ಗ್ರಾಮ ಸಮಯಕದ ಜಮೀನನ್ನು ಸ್ಥಳೀಯ ಶಾಸಕ ಅಭಯ ಪಾಟೀಲ ಅವರ ಸಹೋದರ ಹಾಗೂ ಬೆಂಬಲಿಗರು ಗುಂಡಾ ವರ್ತನೆ ತೋರಿ ಕಬಳಿಸುವ ಹುನ್ನಾರ ನಡೆಸಿದ್ದಾರೆ ಅವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಇಲ್ಲಿನ ಗ್ರಾಮಸ್ಥರು ಚೋರ್ ಹೈ. ಚೋರ್ ಹೈ. ಅಭಯ ಪಾಟೀಲ ಚೋರ್ ಹೈ ಎಂದು ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯ ಎದುರು ಪ್ರತಿಭಟನೆ ನಡೆಸಿದ್ದಾರೆ.

ಬೆಳಗಾವಿಯ ಖಾದರವಾಡಿಯ ಗ್ರಾಮದಲ್ಲಿ ಇಲ್ಲಿನ ಗ್ರಾಮ ಸಮಯಕನ ಸುಮಾರು 75 ಎಕರೆ ಜಮೀನನ್ನು ಶಾಸಕ ಅಭಯ ಪಾಟೀಲ ಸಹೋದರ ಶಿಥಲ್ ಪಾಟೀಲ್ ಹಾಗೂ ಸುಷ್ಮಾ ಪಾಟೀಲ ಅವರ ಹೆಸರಿನಲ್ಲಿ 6 ಎಕರೆ ಜಮೀನು ಖರೀದಿ ಮಾಡಿ ಗ್ರಾಮದ ಜನರಿಗೆ ಅನ್ಯಾಯ ಮಾಡಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ 6 ಎಕರೆ ಜಮೀನು ಕಬಳಿಕೆ ಮಾಡಲು ಶಾಸಕ ಅಭಯ ಪಾಟೀಲ ದಬ್ಬಾಳಿಕೆಯಿಂದ ನಗರಾಭಿವೃದ್ಧಿ ಪ್ರಾಧಿಕಾರದವರು ಜಮೀನು ವಶಪಡಿಸಿಕೊಳ್ಳಲು ಗ್ರಾಮಸ್ಥರಿಗೆ ನೋಟಿಸ್ ನೋಡಿ ಬೇದರಿಕೆ ಹಾಕಿ ಜಮೀನು ವಶಪಡಿಸಿಕೊಂಡಿದ್ದಾರೆ. ರೈತರಿಗೆ 13 ಲಕ್ಷ ಪರಿಹಾರ ಕೊಡುತ್ತಾರೆ. ಆದರೆ ಬುಡಾದಲ್ಲಿ ಕೋಟ್ಯಂತರ ರೂ.ಗೆ ಪರಿಹಾರ ನೀಡಿದ್ದೇವೆ ಎಂದು ದಾಖಲೆ ಇದೆ



ಎಂದು ಹರಿಹಾಯ್ದರು.

ಒಂದು ಕೋಟಿ 8 ಲಕ್ಷ ರೂ.ಗೆ ಒಂದು ಎಕರೆ ಜಮೀನಿಗೆ ಪರಿಹಾರ ಕೊಡಲಾಗಿದೆ ಎಂದು ಬುಡಾದಲ್ಲಿ ಶಾಸಕ ಅಭಯ ಪಾಟೀಲ ಒತ್ತಾಯದ ಮೇರೆಗೆ ಬರೆಸಲಾಗಿದೆ. ಇದು ಕಾನೂನು ಬಾಹೀರ. ಈ ಕುರಿತು ಈಗಾಗಲೇ ಗ್ರಾಮಸ್ಥರು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಗಮನಕ್ಕೂ ತರಲಾಗಿದೆ. ನಮಗೆ ನ್ಯಾಯ ದೊರಕಿಸಿಕೊಡಬೇಕೆಂದು ಆಗ್ರಹಿಸಿದ್ದಾರೆ.


ಪ್ರತಿಭಟನೆಯಲ್ಲಿ ಸಾಮಾಜಿಕ ಕರ್ಯರ್ತ ಸುಜೀತ್ ಮುಳಗುಂದ, ರಾಯಪ್ಪ ಹಂಚಿನಾಳ, ಯಲ್ಲಮ್ಮ ದೀವಾಳಿಕರ್, ಜ್ಯೋತಿ ಗಡಾದ ಸೇರಿದಂತೆ ನೂರಾರು ಜನರು ಉಪಸ್ಥಿತರಿದ್ದಾರೆ.

# ಮಾರ್ಚ್ ಅಂತ್ಯಕ್ಕೆ ಚಿಕ್ಕರಂಗನಾಥ, ಕೊಂಗಳ,ಮತ್ತು ಮುಡಿಗುಂಡ ಕೆರೆ ಕಾಮಗಾರಿ ಪೂರ್ಣ: ಸಚಿವ ಎನ್.ಎಸ್.ಭೋಸರಾಜು

**ಸುವರ್ಣಸೌಧ: ಬೆಳಗಾವಿ:** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಚಿಕ್ಕರಂಗನಾಥ, ಕೊಂಗಳ ಮತ್ತು ಮುಡಿಗುಂಡ ಕೆರೆಗಳ ಅಭಿವೃದ್ಧಿಯ 5 ಕಾಮಗಾರಿಗಳಿಗೆ ರಾಜ್ಯ ಸರ್ಕಾರ ರೂ.10 ಕೋಟಿ ಮಂಜೂರು ಮಾಡಿದೆ. ಈಗಾಗಲೇ ರೂ.3.38 ಕೋಟಿ ಬಿಡುಗಡೆಯಾಗಿದ್ದು, 2024ರ ಮಾರ್ಚ್ ಅಂತ್ಯಕ್ಕೆ ಕಾಮಾಗರಿಗಳು ಪೂರ್ಣಗೊಳ್ಳಲಿವೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ಹೇಳಿದರು.

ಮಂಗಳವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಕೃಷ್ಣಮೂರ್ತಿ.ಎ.ಆರ್ ಪ್ರಶ್ನೆಗೆ ಅವರು ಉತ್ತರಿಸಿದರು.

ಈ ಕೆರೆಗಳು ಒತ್ತುವರಿ ತೆರವುಗೊಳಿಸಿ ಕಾಮಗಾರಿಗಳನ್ನು ಮುಂದುವರಿಸುವಂತೆ ರೈತರು ಮನವಿ ಮಾಡಿದ್ದಾರೆ. ಈ ಕಾರಣದಿಂದ ಕಾಮಗಾರಿ ಪ್ರಗತಿಯು ಕುಂಠಿತಗೊಂಡಿದೆ. ಈ ಕೆರೆಗಳ ಅಚ್ಚುಕಟ್ಟು



ಪ್ರದೇಶದ ಮುಂಗಾರು ಬೆಳೆಗಳಿಗೆ ನೀರು ನೀಡಲು ಕಬಿನಿ ನಾಲೆಯಿಂದ ಕೆರೆಗಳಿಗೆ ನೀರು ಹರಿಸಲಾಗಿದೆ. ಈ 5 ಕಾಮಗಾರಿಗಳ ಗುತ್ತಿಗೆ ಮೊತ್ತ ರೂ.8.30 ಕೋಟಿ ಆಗಿದೆ. ಹೊಂಗನೂರು ಹಿರೆ ಕೆರೆಯು 732 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವನ್ನು ಹೊಂದಿದೆ. 30.ಕಿ.ಮೀ ಕೆನಾಲ್ ನಿರ್ಮಿಸಬೇಕಿದೆ. ಈ ಕೆರೆಯ ಅಭಿವೃದ್ಧಿ ರೂ.18 ಕೋಟಿ ಅವಶ್ಯಕತೆ ಇದೆ. ಅನುದಾನ ಲಭ್ಯತೆ ಮೇಲೆ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದಾಗಿ ಸಚಿವ ಎನ್.ಎಸ್.ಭೋಸರಾಜು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಲಬುರಗಿ ತಾಲ್ಲೂಕಿನ ಅಫಜಲಪುರ ಮತಕ್ಷೇತ್ರ ವ್ಯಾಪ್ತಿಯ ಫಿರೋಜೊಬಾದ್ ಏತ ನೀರಾವರಿ ಯೋಜನೆ 2019-20ರಲ್ಲಿ ಸರ್ಕಾರ ರೂ.2.88 ಬಿಡುಗಡೆ ಮಾಡಿದೆ. ಆದರೆ ಏತ ನೀರಾವರಿ ಪುನರುಜ್ಜೀವನಗೊಳಿಸಲು ವಾಸ್ತವಾಗಿ ರೂ.15.14 ಕೋಟಿ ಅವಶ್ಯಕವಿದ್ದು, ಅನುದಾನದ ಲಭ್ಯತೆ ಆಧರಿಸಿ ಕಾಮಗಾರಿ ಮಂಜೂರಾತಿ ನೀಡುವುದಾಗಿ ಶಾಸಕ ಪಾಟೀಲ್.ಎಂ.ವೈ ಪ್ರಶ್ನೆಗೆ ಸಚಿವ ಸಚಿವ ಎನ್.ಎಸ್.ಭೋಸರಾಜು ಉತ್ತರಿಸಿದರು.

# ಜಾನಪದ ವಿವಿಯಲ್ಲಿನ ಅಕ್ರಮ ನೇಮಕಾತಿ ರದ್ದತಿಗೆ ಆಗ್ರಹಿಸಿ ಪ್ರತಿಭಟನೆ

ಬೆಳಗಾವಿ: ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಅಕ್ರಮವಾಗಿ ನೇಮಕವಾಗಿರುವ ಬೋಧಕ ಬೋಧಕೇತರ ಹುದ್ದೆಗಳನ್ನು ರದ್ದುಗೊಳಿಸಿ ಮರು ಅಧಿಸೂಚನೆ ಹೊರಡಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ಜಾನಪದ ಸ್ನಾತಕೋತ್ತರ ಹಾಗೂ ಸಂಶೋಧಕರ ಒಕ್ಕೂಟ ಪ್ರತಿಭಟನೆ ನಡೆಸಿತು.

ಕರ್ನಾಟಕ ರಾಜ್ಯ ಜಾನಪದ ಸ್ನಾತಕೋತ್ತರ ಹಾಗೂ ಸಂಶೋಧಕರ ಒಕ್ಕೂಟ ಅಧ್ಯಕ್ಷ ಡಾ. ಶಿವಸೋಮಪ್ಪ ನಿಟ್ಟೂರು ಮಾತನಾಡಿ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಅಕ್ರಮವಾಗಿ ನೇಮಕವಾಗಿರುವ



ಬೋಧಕ ಬೋಧಕೇತರ ಹುದ್ದೆಗಳನ್ನು ರದ್ದುಗೊಳಿಸಿ ಮರು ಅಧಿಸೂಚನೆ ಹೊರಡಿಸಬೇಕೆಂದು ಸರ್ಕಾರಕ್ಕೆ ಹಾಗೂ ಅಧಿಕಾರಿಗಳಿಗೆ ಅನೇಕ ಬಾರಿ ಮನವಿ ಮಾಡಿಕೊಂಡಿದ್ದು, ಇದುವರೆಗೂ ಯಾವುದೇ ಕ್ರಮ ಜರುಗಿಸಿರುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಯುಜಿಸಿ ನಿಯಮಗಳ ಪ್ರಕಾರ, ಅಧಿಸೂಚನೆಯನ್ನು ಹೊರಡಿಸಿದ ಆರು ತಿಂಗಳೊಳಗೆ ಸಂದರ್ಶನ ಪ್ರಕ್ರಿಯೆಯನ್ನು ತೆಗೆದುಕೊಳ್ಳದಿದ್ದರೆ, ಅಧಿಸೂಚನೆಯನ್ನು ರದ್ದುಗೊಳಿಸಬೇಕು ಮತ್ತು ಹೊಸದಾಗಿ ಅಧಿಸೂಚನೆಯನ್ನು ಹೊರಡಿಸಬೇಕು. ಆದರೆ, ಜಾನಪದ ವಿಶ್ವವಿದ್ಯಾನಿಲಯ ಈ ಮಾನದಂಡ ಅನುಸರಿಸಿಲ್ಲ," ಎಂದರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಆವರಣದಲ್ಲಿ ಕಳೆದ ಒಂದು ವಾರದಿಂದ ಅಹೋರಾತ್ರಿ ವಿವಿಧ ಸಂಘಟನೆಗಳ ಮುಖಂಡರು ಧರಣಿ ಮಾಡುತ್ತಿದ್ದೇವೆ. ಆದರೆ ಇದುವರೆಗೂ ಯಾವೊಬ್ಬ ಸರ್ಕಾರದ ಪ್ರತಿನಿಧಿ ಬಂದು ಮನವಿ ಸ್ವೀಕರಿಸಿಲ್ಲ. ಆದ್ದರಿಂದ ಸುವರ್ಣ ಸೌಧದ ಮುಂದೆ ಧರಣಿ ಮಾಡುವ ಮೂಲಕ ತಮ್ಮಲ್ಲಿ ಕೇಳಿಕೊಳ್ಳುವುದೇನೆಂದರೆ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಅಕ್ರಮ ನೇಮಕಾತಿ ರದ್ದುಗೊಳಿಸಿ ಮರು ಅಧಿಸೂಚನೆ ಹೊರಡಿಸಬೇಕೆಂದು ಆಗ್ರಹಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಜಾನಪದ ಸ್ನಾತಕೋತ್ತರ ಹಾಗೂ ಸಂಶೋಧಕರ ಒಕ್ಕೂಟ ಉಪಾಧ್ಯಕ್ಷ ಡಾ.ಎಂ. ವೈ. ಬ್ಯಾಲಾಳ, ಸಂಘಟನಾ ಕಾರ್ಯದರ್ಶಿ ಡಾ. ನಾಗರಾಜ ಎಸ್., ಖಜಾಂಚಿ ರಾಮಣ್ಣ, ಸಹ ಕಾರ್ಯದರ್ಶಿ ನಾಗರಾಜ ಸಿ. ಇಟಗಿ ಸೇರಿದಂತೆ ಸದಸ್ಯರಾದ ಮಹಿಪಾಲರೆಡ್ಡಿ, ಮಧುಕುಮಾರ, ನರಸಪ್ಪ ಚೆನ್ನದಾಸರ, ಯಮನೂರಪ್ಪ, ಹಾಲೇಶ, ಆಂಜನೆಯ, ಪರುಶುರಾಮ, ಗೋಪಿ ಮೊಪಗಾರ, ಭೀಮಪ್ಪ ಬಜೆಂತ್ರಿ,

ಕುಮಾರ ಓಲೆಕಾರ, ನಾಗೇಶ ನಾಯಕ, ಜಗದೀಶ ಇಂಗಳಕಿ, ನಾಗರಾಜ ಯಲವಗಿ, ವಿದ್ಯಾ ಪಾಟನಕರ ಇದ್ದರು.

# ಶೇ.೮೦ ರಷ್ಟು ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ: ಗೃಹ ಸಚಿವ ಡಾ.ಜಿ.ಪರಮೇಶ್ವರ

ಮೊದಲನೇ ಪುಟದಿಂದ}

**ಆಯವ್ಯಯದಲ್ಲಿ ಹೊಸ ಅಗ್ನಿಶಾಮಕ ಠಾಣೆಗೆ ಪ್ರಸ್ತಾವನೆ :** ರಾಜ್ಯದ ಹಲವು ತಾಲ್ಲೂಕು ಕೇಂದ್ರಗಳಲ್ಲಿ ಹೊಸ ಅಗ್ನಿಶಾಮಕ ಠಾಣೆ ನಿರ್ಮಿಸಲು ಶಾಸಕರಿಂದ ಕಡೆಯಿಂದ ಮನವಿಗಳು ಬಂದಿವೆ. ಈ ಮನವಿಗಳನ್ನು ಪರಿಗಣಿಸಿ ಮುಂದಿನ ಆಯವ್ಯಯದಲ್ಲಿ ಹೊಸ ಅಗ್ನಿಶಾಮಕ ಠಾಣೆ ನಿರ್ಮಿಸಲು ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದಾಗಿ ಡಾ.ಜಿ.ಪರಮೇಶ್ವ ಹೇಳಿದರು.

ಮೂಡಲಗಿಯಲ್ಲಿ ಕಳೆದ ವರ್ಷ 2 ಶಾಪ್ಗಳಿಗೆ ಬೆಂಕಿ ಬಿದ್ದು ಕೋಟ್ಯಾಂತರ ರೂಪಾಯಿಗಳ ನಷ್ಟ ಸಂಭವಿಸಿದೆ. ಗೋಕಾಕ್ ದೂರ ಇರುವುದರಿಂದ ಮೂಡಲಗಿಯಲ್ಲಿಯೇ ಅಗ್ನಿಶಾಮಕ ಠಾಣೆ ನಿರ್ಮಿಸವುದು ಅಗತ್ಯವಿದೆ. ಈಗಾಗಲೇ 1.20 ಎಕರೆ ಜಮೀನು ಸಹ ಗುರುತಿಸಿ, ಗೃಹ ಇಲಾಖೆ ನೀಡಲಾಗಿದೆ. ಸರ್ಕಾರ ಆದ್ಯತೆ ಮೇರೆಗೆ ಕ್ರಮಕೈಗೊಳ್ಳಬೇಕು ಎಂದು ಶಾಸಕ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ ಕೋರಿದರು.

**ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನು :**

**ಸುವರ್ಣಸೌಧ: ಬೆಳಗಾವಿ:** ಸರ್ಕಾರ ಡ್ರಗ್ಸ್ ಹಾಗೂ ಮಾದಕ ಪದಾರ್ಥಗಳ ಮಾರಾಟವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಆರೋಗ್ಯ, ಆಹಾರ ಇಲಾಖೆಗಳೊಂದಿಗೆ ಚರ್ಚಿಸಿ ಶೀಘ್ರವೇ ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನು ರೂಪಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಹುಕ್ಕಾ ಬಾರ್ ಸ್ಥಾಪನೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಯಾವುದೇ ರೀತಿಯ ವ್ಯಾಪಾರ ಪರವಾನಿಗೆ ನೀಡುವುದಿಲ್ಲ. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ (FSSAI) ದಿಂದ ಪರವಾನಿ ಪಡೆದು ವ್ಯಾಪಾರಿಗಳು ಹುಕ್ಕಾ ಬಾರ್‌ಗಳನ್ನು ನಡೆಸುತ್ತಿದ್ದಾರೆ. ನ್ಯಾಯಲಯವು ಸಹ ಹುಕ್ಕಾ ಸೇದುವವರಿಗೆ ಪ್ರತ್ಯೇಕ ಸ್ಥಳ ನಿಗದಿ ಪಡಿಸಬೇಕು ಎಂದು ಹೇಳಿದೆ. ನಿಯಂತ್ರಣದ ಬಗ್ಗೆ ಹೇಳಿಲ್ಲ. ಆದರೂ ಯುವ ಜನಾಂಗದ ಸ್ವಾಥ್ಯದ ದೃಷ್ಠಿಯಿಂದ ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನೂ ರೂಪಿಸಲಾಗುವುದು ಎಂದರು.

**ಗೃಹ ರಕ್ಷಕರ ಕರ್ತವ್ಯ ಭತ್ಯೆ ಪರಿಷ್ಕರಣೆ:**

**ಸುವರ್ಣಸೌಧ: ಬೆಳಗಾವಿ:** ಗೃಹ ರಕ್ಷಕರಿಗೆ ಬೇರೆ ರಾಜ್ಯಗಳಲ್ಲಿ ನೀಡುತ್ತಿರುವ ಭತ್ಯೆಯನ್ನು ಅವಲೋಕಿಸಿ ಶೀಘ್ರವೇ ಕರ್ತವ್ಯ ಭತ್ಯೆಯನ್ನು ಪರಿಷ್ಕರಣೆ ಮಾಡುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

21,327 ಪುರಷ ಹಾಗೂ 4555 ಮಹಿಳೆ ಸೇರಿ ಒಟ್ಟು 25,882 ಗೃಹರಕ್ಷರು ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರ ಆದೇಶದಂತೆ ಪೊಲೀಸ್ ಇಲಾಖೆಯ ಬಂದೋಬಸ್ತ್, ಕಾನೂನು ಸುವ್ಯವಸ್ಥೆ, ಸಂಚಾರ ನಿಯಂತ್ರಣ ಹಾಗೂ ಠಾಣೆ ಕಾರ್ಯಗಳಲ್ಲಿ ಕರ್ತವ್ಯ ನಿರ್ವಹಿಸುವ ಗೃಹರಕ್ಷಕರಿಗೆ ರೂ.750, ಬೇರೆ ಇಲಾಖೆಗಳಲ್ಲಿ ರೂ.600 ಹಾಗೂ ಪಹರೆ ಕೆಲಸಕ್ಕೆ ಬೆಂಗಳೂರು ನಗರದಲ್ಲಿ ರೂ.455 ಹಾಗೂ ಇತರೆ ಸ್ಥಳದಲ್ಲಿ ರೂ.380 ಭತ್ಯೆ ನೀಡಲಾಗುತ್ತಿದೆ. ಈ ವ್ಯತ್ಯಾಸವನ್ನು ಸರಿ ಪಡಿಸಿ ರೂ.750 ದಿನಭತ್ಯೆ ನೀಡಲು ಸರ್ಕಾರ ಮಟ್ಟದಲ್ಲಿ ಚಿಂತಿಸಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು. ಗೃಹರಕ್ಷಕರಲ್ಲಿ ಯಾವುದೇ ತಾರತಮ್ಯ ಇಲ್ಲದೆ ಕರ್ತವ್ಯಕ್ಕೆ ನಿಯೋಜಿಸಬೇಕು. ಗೃಹರಕ್ಷಕರಿಗೆ ಆರೋಗ್ಯ ಭದ್ರತೆ, ಪ್ರಯಾಣ ಭತ್ಯೆಗಳನ್ನು ನೀಡಬೇಕು ಎಂದು ಶಾಸಕಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ ಒತ್ತಾಯಿಸಿದರು.

# ಪಂಚಮಸಾಲಿ 2ಎ ಮೀಸಲಾತಿ ಹೋರಾಟ: ಸಿಎಂ ಸಭೆ ಬಳಿಕ ಮುಖಂಡರಲ್ಲಿ ಭಿನ್ನ ನಿಲುವು

ಬೆಳಗಾವಿ: ಪಂಚಮಸಾಲಿ ಸಮುದಾಯಕ್ಕೆ 2 ಮೀಸಲಾತಿ ಹೋರಾಟ ಇದೀಗ ಮತ್ತೆ ಆರಂಭವಾಗಿದ್ದು, ಬೆಳಗಾವಿ ಅಧಿವೇಶನದ ನಡುವೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆ ನಡೆಸಿದ್ದಾರೆ. ಆದರೆ, ಸಭೆ ಮುಕ್ತಾಯದ ನಂತರ ನಡೆದ ಮುಖಂಡರ ಸಭೆಯಲ್ಲಿ ಹೈಡ್ರಾಮವೇ ನಡೆಯಿತು.

ಸಿಎಂ ಸಭೆ ನಂತರ ಪಂಚಮಸಾಲಿ ಮುಖಂಡರ ಸಭೆ ನಡೆಯಿತು. ಈ ವೇಳೆ ಹೋರಾಟ ಮಾಡಬೇಕಾ? ಬೇಡವಾ? ಸಿಎಂ ನೀಡಿದ ಗಡುವಿನವರೆಗೂ ಕಾಯಬೇಕಾ ಅನ್ನೋದರ ಬಗ್ಗೆ ಚರ್ಚೆ ನಡೆಯಿತು. ಈ ವೇಳೆ ಬಸವ ಜಯಮೃತ್ಯುಂಜಯಶ್ರೀ ಎದುರೇ ವಿಜಯಾನಂದ ಕಾಶಪ್ಪನವರ್ ಮತ್ತು ಪದಾಧಿಕಾರಿಗಳ ನಡುವೆ ವಾಗ್ವಾದ ನಡೆಯಿತು. ರಾಜಕಾರಣ ಮಾಡುವುದು ಬೇಡ ಎಂದು ಕಾಶಪ್ಪನವರ್ ಗದರಿದರು. ಅಂತಿಮವಾಗಿ ಕಾಶಪ್ಪನವರ್, ಕುಲಕರ್ಣಿ ತೀರ್ಮಾನಕ್ಕೆ ಬದ್ಧ ಎಂದು ಸದಸ್ಯರು ಹೇಳಿದರು.

ಚೆನ್ನಮ್ಮ ಸರ್ಕಲ್ ಬಳಿ ಬೃಹತ್ ಸಭೆ: ಸಭೆ ಬಳಿಕ ಮಾತನಾಡಿದ ಬಸವ ಜಯಮೃತ್ಯುಂಜಯ ಸ್ವಾಮೀಜಿ, ಬೃಹತ್ ಪ್ರಮಾಣದ ಹೋರಾಟಕ್ಕೆ ನಾಳೆ ಕರೆ ಕೊಡಲಾಗಿದೆ. ಈ ಹೋರಾಟಕ್ಕೆ ಮಣಿದ ಸರ್ಕಾರ ಇಂದು ನಮ್ಮೊಂದಿಗೆ ಮುಕ್ತ ಮಾತುಕತೆ ಮಾಡಿದೆ. ರಾಜ್ಯಾದ್ಯಂತ ಬರುವ ನಮ್ಮ ಎಲ್ಲ ಸಮಾಜದ ಬಂಧುಗಳು, ಮುಖಂಡರು ನಾಳೆ ಚೆನ್ನಮ್ಮ ಸರ್ಕಲ್ ಬಳಿ ಸಭೆ ಸೇರಿ ಹೋರಾಟದ ಬಗ್ಗೆ ಚರ್ಚಿಸೋಣ ಎಂದರು.

ಮುಖ್ಯಮಂತ್ರಿ ಏನು ಚರ್ಚೆ ಮಾಡಿದ್ದಾರೆ, ನಾವು ಯಾವ ನಿಲುವನ್ನ ತೆಗೆದುಕೊಳ್ಳಬೇಕು ಅನ್ನೋದರ ಬಗ್ಗೆ ಸಂಜೆ ನಿರ್ಧಾನ ಮಾಡುತ್ತೇವೆ. ಇಂದು ಬೆಳಗ್ಗೆ 10 ಗಂಟೆಗೆ ಚೆನ್ನಮ್ಮ ಸರ್ಕಲ್ ಬಳಿ ಬೃಹತ್ ಪಂಚಮಸಾಲಿ ಸಭೆ ನಡೆಯಲಿದೆ.



ನಾಳೆ ನಮ್ಮ ಮುಂದಿನ ನಿರ್ಧಾರವನ್ನ ಪ್ರಕಟ ಮಾಡುತ್ತೇವೆ ಎಂದರು.

ಸಭೆ ಬಳಿಕ ಮಾತನಾಡಿದ ಶಾಸಕ ಅರವಿಂದ್ ಬೆಲ್ಲದ್, ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರವು ಒಕ್ಕಲಿಗರಿಗೆ ಶೇ.6, ಲಿಂಗಾಯರಿಗೆ ಶೇ.7 ರಷ್ಟು ಮೀಸಲಾತಿ ಘೋಷಿಸಿತ್ತು. ಹಿಂದಿನ ಸರ್ಕಾರದ ಆದೇಶ ಪಾಲಿಸಿ ಅಂತ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದೇವೆ. ಈ ಬಗ್ಗೆ ವಿಚಾರ ಮಾಡುತ್ತೇವೆ ಅಂತ ಹೇಳಿದ್ದಾಗಿ ತಿಳಿಸಿದರು.

ಮೀಸಲಾತಿ ವಿಚಾರದಲ್ಲಿ ಸಂಪುಟದ ನಿರ್ಧಾರ ಇದರಲ್ಲಿ ಬಹಳ ಮುಖ್ಯವಾಗಿದೆ. ಶೀಘ್ರವಾಗಿ ನಿರ್ಧಾರ ತೆಗೆದುಕೊಳ್ಳಿ ಎಂದಿದ್ದೇವೆ. ಸಭೆಯಲ್ಲಿ ಯಾವ ವಿಚಾರವೂ ಇತ್ಯರ್ಥ ಆಗಿಲ್ಲ. ಸ್ವಾಮೀಜಿ ನೇತ್ರತ್ವದಲ್ಲಿ ನಾಳೆ ಹೋರಾಟ ನಡೆಯಲಿದೆ ಎಂದರು.

ಕಾಂತರಾಜು ವರದಿಯಲ್ಲಿ ಸ್ಯಾಂಪಲ್ ಸಂಗ್ರಹಿಸಿ ಮಾಡಲಾಗಿದೆ. ಬಡ ಲಿಂಗಾಯತ ಜನ ಮೀಸಲಾತಿ ಸಿಗುತ್ತದೆ ಅಂತ ಗಾಣಿಗ, ಕುಂಬಾರ ಅಂತ ಬರೆಸಿಕೊಂಡರು. ಲಿಂಗಾಯತ ಗಾಣಿಗ ಅಂತ ಹಾಕಿಸಿಕೊಂಡಿಲ್ಲ. ಜಾತಿಗಣತಿಗೂ ಮೊದಲು 2C ಮತ್ತು 2D ಮೀಸಲಾತಿ ಜಾರಿ ಮಾಡಿ. ಯಾವ ಸಮುದಾಯಕ್ಕೂ ಅನ್ಯಾಯವಾಗದಂತೆ ನಿರ್ಧಾರ ತಗೆದುಕೊಳ್ಳಬೇಕು ಎಂದರು.

ವಿಜಯಾನಂದ್ ಕಾಶಪ್ಪನವರ್ ಮಾತನಾಡಿ, ನಮ್ಮ ಬೇಡಿಕೆ ಈಡಿರಿಸುವ ಬಗ್ಗೆ ಸಿಎಂ ಭರವಸೆ ನೀಡಿದ್ದಾರೆ. ಚೆನ್ನಮ್ಮ ಸರ್ಕಲ್ ನಲ್ಲಿ ಇಂದು ನಮ್ಮ ನಿಲುವು ಪ್ರಕಟಣೆ ಮಾಡುತ್ತೇವೆ ಎಂದರು. ಹೋರಾಟ ಮಾಡಬೇಕೋ ಬೇಡವೇ ಎಂಬ ಗೊಂದಲ ವಿಚಾರವಾಗಿ ಮಾತನಾಡಿದ ಅವರು, ಮೂರು ವರ್ಷಗಳಿಂದ ಪಕ್ಷಾತಿತವಾಗಿ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಮುಂದೆಯೂ ಹಾಗೇ ನಡೆಯುತ್ತದೆ. ಅದರಲ್ಲಿ ಯಾವುದೇ ವ್ಯತ್ಯಾಸವಿಲ್ಲ ಎಂದರು.

ಸಣ್ಣಪುಟ್ಟ ವ್ಯವಸ್ಥೆ ಇರುತ್ತದೆ. ಅದು ಅವರ ಭಾವನೆಗೆ ತಕ್ಕಂತೆ ಅವರು ಹೇಳುತ್ತಾರೆ. ಹಿಂದೆ ಯಾವ ರೀತಿ ನಡೆದಿದೆ ಆ ರೀತಿ ನಡೆದರೆ ಅವರಿಗೂ ಗೌರವ ನಮಗೂ ಗೌರವ. ಅದನ್ನ ಉಳಿಸಿಕೊಳ್ಳುವುದು ಅವರವರಿಗೆ ಬಿಟ್ಟ ವಿಚಾರ ಎಂದರು.

# ಇಲಾಖೆಗೆ ಕೆಟ್ಟ ಹೆಸರು ಬರದಂತೆ ಕೆಲಸ ಮಾಡಬೇಕು

## ಅಧಿಕಾರಿಗಳಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೂಚನೆ

ಬೆಳಗಾವಿ: ನಮ್ಮ ಗುರಿ ಸಧೃಡ ಭಾರತ, ಸದೃಢ ಕರ್ನಾಟಕ ನಿರ್ಮಾಣ. ನಾವು ಮಕ್ಕಳ ಜೀವ ಮತ್ತು ಜೀವನದ ಜೊತೆ ಕೆಲಸ ಮಾಡುತ್ತಿದ್ದೇವೆ. ಹಾಗಾಗಿ ಎಲ್ಲರೂ ಸೂಕ್ತ ರೀತಿಯಿಂದ. ಇಲಾಖೆಗೆ ಕೆಟ್ಟ ಹೆಸರು ಬರದಂತೆ ಕೆಲಸ ಮಾಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರ ಸಭೆ ನಡೆಸಿ ಅವರು ಮಾತನಾಡುತ್ತಿದ್ದರು. ಪ್ರತಿಯೊಬ್ಬರೂ ಆಯಾ ಜಿಲ್ಲೆಯ, ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಇಲಾಖೆಯ ಕಾರ್ಯವೈಖರಿಯ ಕುರಿತು ಸ್ಪಷ್ಟವಾದ ಮಾಹಿತಿ ನೀಡಬೇಕು. ಜನಪ್ರತಿನಿಧಿಗಳಿಗೆ ಗೌರವ ಕೊಟ್ಟು ಕೆಲಸ ನಿರ್ವಹಿಸಬೇಕು. ಆಹಾರದ ಗುಣಮಟ್ಟದ ಬಗ್ಗೆ ಗಮನಕೊಡಬೇಕು.




ಯಾವುದೇ ಒಂದು ಮಗುವಿಗೂ ಕೂಡ ಕಳಪೆ ಆಹಾರ ಹೋಗಕೂಡದು. ಎಲ್ಲೂ ಸಮಸ್ಯೆಯಾಗಬಾರದು. ಎಂದು ಸಚಿವರು ಸ್ಪಷ್ಟವಾಗಿ ಸೂಚಿಸಿದರು.

ನಾವು ಮಂತ್ರಿಗಳು ಇಂದು ಇರಬಹುದು, 5 ವರ್ಷದ ಬಳಿಕ ಬದಲಾಗಬಹುದು. ಆದರೆ ಅಧಿಕಾರಿಗಳು ನಿರಂತರವಾಗಿ ಇರುವವರು. ಯಾವುದೇ ಗೊಂದಲ ಸೃಷ್ಟಿಯಾಗದಂತೆ ಕೆಲಸ ನಿರ್ವಹಿಸಬೇಕು. ಏನೇ ಸಮಸ್ಯೆಗಳಿದ್ದರೂ ತಕ್ಷಣ ನನ್ನ ಗಮನಕ್ಕೆ ತರಬೇಕು ಹಗೂ ಸರಿಪಡಿಸಿಕೊಳ್ಳಬೇಕು. ಆಹಾರದ ಗುಣಮಟ್ಟ ತೃಪ್ತಿಕರವಾಗಿಲ್ಲ ಎಂದರೆ ಅಂತಹ ಪೂರೈಕೆದಾರರನ್ನು ರದ್ದುಪಡಿಸೋಣ. ಆಹಾರದ ಪ್ರಮಾಣ ಮತ್ತು ಗುಣಮಟ್ಟ ಎರಡೂ ಸರಿಯಾಗಿರಬೇಕು. ಗ್ಯಾಸ್, ತರಕಾರಿಯ ಹಣ ಮತ್ತು ಸಂಬಳ ಎಲ್ಲವೂ ಸರಿಯಾಗಿ ಹೋಗಬೇಕು. ನಿರಂತರವಾಗಿ ಅಂಗನವಾಡಿ ಕಾರ್ಯಕರ್ತರ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಬೇಕು ಎಂದು ಸಚಿವರು ಸೂಚಿಸಿದರು.

ಕ್ಷೀರಭಾಗ್ಯ ಯೋಜನೆಯ ಹಾಲಿನ ಪೌಡರ್ ಎಲ್ಲರಿಗೂ ಕಡ್ಡಾಯವಾಗಿ ತಲುಪಬೇಕು. ವಾಹನಗಳ ಬಾಕಿ ಬಾಡಿಗೆ ಹಣವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಒಟ್ಟಾರೆ ಇಲಾಖೆಗೆ ಒಳ್ಳೆಯ ರೀತಿಯ ಹೆಸರು ಬರುವಂತೆ ಎಲ್ಲರೂ ಸೇರಿ ಕೆಲಸ ಮಾಡಿ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.

ಇಲಾಖೆಯ ಕಾರ್ಯದರ್ಶಿ ಡಾ.ಜಿ.ಸಿ ಪ್ರಕಾಶ್, ನಿರ್ದೇಶಕಿ ಅರ್ಚನ, ವಿಶೇಷ ಕರ್ತವ್ಯಾಧಿಕಾರಿ ನಿಶ್ಚಲ ಬಿ.ಹೆಚ್ ಉಪಸ್ಥಿತರಿದ್ದರು.

# ಅಕ್ರಮ ಕಟ್ಟಡಗಳ ತೆರವಿಗೆ ಆಗ್ರಹಿಸಿ ಧರಣಿ

ಕೆಂಭಾವಿ: ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಅನುಮತಿಯಿಲ್ಲದೆ ಕಟ್ಟಡ ನಿರ್ಮಿಸುತ್ತಿರುವ ಮಾಲೀಕರು ಹಾಗೂ ಅನುಮತಿ ನೀಡಿದ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು, ಅಕ್ರಮ ಕಟ್ಟಡಗಳನ್ನು ತೆರವುಗೊಳಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಬಿ.ಕೃಷ್ಣಪ್ಪ ಬಣ) ಪದಾಧಿಕಾರಿಗಳು ಆಗ್ರಹಿಸಿದ್ದಾರೆ.



ಈ ಕುರಿತು ಮಂಗಳವಾರ ಪುರಸಭೆ ಮುಂಭಾಗದಲ್ಲಿ ನಿರಂತರ ಧರಣಿ ಆರಂಭಿಸಲಾಗಿದ್ದು, ಧರಣಿಯಲ್ಲಿ ಪಾಲ್ಗೊಂಡ ಹಲವು ಮುಖಂಡರು ಮಾತನಾಡಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ಸುರಪುರ-ಹುನಗುಂದ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಂತೆ ಕೆಲವು ಸರ್ವೇ ನಂಬರನ ಜಮೀನುಗಳಲ್ಲಿ ಯಾವುದೆ ಟೌನಪ್ಲಾನ್ ಎನ್ಎ ಇಲ್ಲದೆ ಮಳಿಗೆಗಳ ಕಟ್ಟಡ ನಿರ್ಮಾಣ ಮಾಡುತ್ತಿದ್ದಾರೆ.

ಸರಕಾರದ ನಿಯಮಾನುಸಾರ ನಗರ ಯೋಜನಾ ಪ್ರಾಧಿಕಾರದ ಅನುಮತಿ ಹಾಗೂ ಎನ್ಎ ಇಲ್ಲದೆ ಇರುವದಕ್ಕೆ ಕಟ್ಟಡ ಪರವಾನಿಗೆ ನೀಡಬಾರದು ಎಂಬ ನಿಯಮವಿದ್ದರೂ ಅಧಿಕಾರಿಗಳು ಸಾಕಾಷ್ಟು ಲಂಚ ಪಡೆದುಕೊಂಡು ಮಳಿಗೆಗಳನ್ನು ನಿರ್ಮಿಸುವದಕ್ಕೆ ಅನುಮತಿ ನೀಡಿದ್ದಾರೆ.

ಈ ಕುರಿತು ಅನೇಕ ಬಾರಿ ಮೇಲಾಧಿಕಾರಿಗಳ ಗಮನಕ್ಕೆ ತಂದರೂ ಯಾವದೇ ಪ್ರಯೋಜನವಾಗಿಲ್ಲ. ಆದ್ದರಿಂದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದ ಅವರು ಅಕ್ರಮದಲ್ಲಿ ಭಾಗಿಯಾಗಿರುವ ಪುರಸಭೆ ಅಧಿಕಾರಿಗಳು ಹಾಗೂ ಅಕ್ರಮ ಕಟ್ಟಡ ಕಟ್ಟುತ್ತಿರುವ ಮಾಲೀಕರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಎಲ್ಲ ಅಕ್ರಮ ಕಟ್ಟಡಗಳನ್ನು ನೆಲಸಮಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ. ಧರಣಿಯಲ್ಲಿ ಜಿಲ್ಲಾ ಸಂಚಾಲಕ ನಿಂಗಣ್ಣ ಗೋನಾಲ, ಹೆಚ್.ಆರ್.ಬಡಿಗೇರ, ಸಹ ಸಂಚಾಲಕ ಧರ್ಮಣ್ಣ ಹೊಸಮನಿ, ಸಾಯಬಣ್ಣ ಎಂಟಮಾನ, ಸದಾಶಿವ ಬೊಮ್ಮನಹಳ್ಳಿ, ನಾಗು ಗೋಗಿಕರ, ವಿಠ್ಠಲ ಬಾಂಡೆ, ಸಿದ್ದು ಜೋಗೆರ್, ಸುರೇಶ ಮಾಳಳ್ಳಿಕರ್, ಚಂದ್ರು ಕಕ್ಕೇರಿ, ಪರಮಣ್ಣ ವಠಾರ, ಮಲ್ಲಪ್ಪ ಕಡಕಲ್, ಅನೀಲ ಯಾಳಗಿ ಸೇರಿದಂತೆ ಹಲವರಿದ್ದರು.

# ಸಹಾಯಕ ತರಬೇತಿ ಯುವ ಜನತೆಗೆ ದಾರಿದೀಪ: ಡಾ. ವಿನೋದಾ ಬಾವಡೆಕರ್

ಬೆಳಗಾವಿ: ಯುವ ಜನತೆ ಯೋಗ್ಯ ಉದ್ಯೋಗಾವಕಾಶಗಳನ್ನು ಕಂಡು ಕೊಳ್ಳಲು ಕರ್ತವ್ಯ ಸಹಾಯಕ ತರಬೇತಿ ಸಹಕಾರಿಯಾಗಲಿದೆ. ಸಾಮಾನ್ಯ ಜ್ಞಾನ ಹಾಗೂ ಕೌಶಲ್ಯ ಬೆಳೆಸಿಕೊಂಡಾಗ ಮಾತ್ರ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಭಾರತೀಯ ಕುಟುಂಬ ಯೋಜನೆ ಸಂಘದ ಡಾ. ವಿನೋದಾ ಬಾವಡೆಕರ್ ಅವರು ತಿಳಿಸಿದರು.

ನಗರದ ಹಿಂಡಾಲ್ಕೊ ಇಂಡಸ್ಟ್ರೀಸ್ ನಲ್ಲಿ ಆವರಣದಲ್ಲಿ ಥರ್ಮೇಕ್ಸ್ ಫೌಂಡೇಶನ್ ಮತ್ತು ಆಶ್ರಯ ಫೌಂಡೇಶನ್ ವತಿಯಿಂದ ಆಯೋಜಿಸಲಾದ ಸಾಮಾನ್ಯ ಕರ್ತವ್ಯ ಸಹಾಯಕ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರ ಮುಂದಿನ ಭವಿಷ್ಯದ ಬಗ್ಗೆ ಸುಂದರ ಕನಸು ಕಟ್ಟಿಕೊಂಡಾಗ ಮಾತ್ರ ನಿಶ್ಚಿತ ಗುರು ಮುಟ್ಟಲು ಸಾಧ್ಯ. ಶಿಕ್ಷ ಣದ ಜತೆಗೆ ಬದುಕಿಗೆ ಪೂರಕ ತರಬೇತಿ ಹೊಂದುವ




ಅಗತ್ಯವಿದೆ. ಜೀವನದಲ್ಲಿ ಬರುವ ಸೋಲು ಗೆಲುವುಗಳನ್ನು ಸಮಾನವಾಗಿ ಸ್ವಿ?ಕರಿಸುವ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದರು.

ಥರ್ಮ್ಯಾಕ್ಸ್ ಬಯೋಮಾಸ್ ಪ್ಲಾಂಟ್ ಸುಂದರೇಸನ್ ಬಾಬುರವರ್ ಸಿ ಎಸ್ ಅರ್ ಚಟುವಟಿಕೆಗಳನ್ನು ಬೆಳಗಾವಿಯಲ್ಲಿ ಪ್ರಥಮ ಬಾರಿಗೆ ಆಯೋಜಿಸಿರುವುದು ಹೆಮ್ಮೆಯ ವಿಷಯ. ಹಿಂಡಾಲ್ಕೋ ಇಂಡಸ್ಟ್ರಿ ಸಹಾಯದಿಂದ ಆಶ್ರಯ ಫೌಂಡೇಶನ್ ಆರ್ಥಿಕ ನೆರವನ್ನು ನೀಡಿ ಈ ತರಬೇತಿ ಪ್ರಾರಂಭಿಸಿದ್ದಾರೆ.ತರಬೇತಿಯಲ್ಲಿ ನಾವು ಎಷ್ಟು ನುರಿತರೂ ಕಡಿಮೆ, ಈ ಅವಕಾಶವನ್ನು ಎಲ್ಲ ಶಿಬಿರಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು. ಭಾರತೀಯ ಕುಟುಂಬ ಕಲ್ಯಾಣ ಸಂಘ ಇದನ್ನುಆಯೋಜಿಸಿರುವುದು ಸಂತಸ ತಂದಿದೆ ಎಂದು ಅಭಿಪ್ರಾಯ ವ್ಯಕ್ತಡಿಸಿದರು .

ಭಾರತೀಯ ಕುಟುಂಬ ಕಲ್ಯಾಣ ಸಂಘದ ಅಧ್ಯಕ್ಷರಾದ ಡಾ. ವಿನೋದ ಬಾವಡೆಕರ್ ಅವರು ಭಾರತೀಯ ಕುಟುಂಬ ಯೋಜನಾ ಸಂಘದಲ್ಲಿ ಇಲ್ಲಿಯವರಿಗೆ ಎರಡು ತಂಡಗಳಿಗೆ ತರಬೇತಿಯನ್ನು ಯಶಸ್ವಿಯಾಗಿ ನೀಡಿದ್ದಾರೆ. ಹಾಗೂ ಆಶ್ರಯ ಫೌಂಡೇಶನ್ ಮತ್ತು ಥರ್ಮ್ಯಾಕ್ಸ್ ಫೌಂಡೇಶನ್ ಸಹಾಯದಿಂದ ನಮ್ಮ ಈ ಸಂಸ್ಥೆಯ ಕೊಠಡಿಯಲ್ಲಿ ಈ ತರಬೇತಿಯನ್ನು ನಾಲ್ಕು ತಿಂಗಳವರೆಗೆ ನಾವು ನಡೆಸಲಿದ್ದೇವೆ ಇಲ್ಲಿ ಎಲ್ಲ ರೀತಿಯ ಥಿಯರಿ ಮತ್ತು ಪ್ರಾಕ್ಟಿಕಲ್ ತರಬೇತಿಯನ್ನು ನೀಡಲಾಗುತ್ತದೆ ನುರಿತ ತರಬೇತಿದಾರರಿಂದ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿರುವ ಆನಂದ್ ಬಾದಾಮಿ ಎಲ್ಲ ಶಿಬಿರಾರ್ಥಿಯರಿಗೆ ತರಬೇತಿಯ ಮಹತ್ವ, ತರಭೇತಿ ನಂತರ ಆಗುವಂಥಹ ಪ್ರಯೋಜನ ಕುರಿತು ಮಾಹಿತಿ ನೀಡಿದರು.

ಹಿಂಡಲ್ಕೋ ಇಂಡಸ್ಟ್ರಿನ ದಿನೇಶ ನಾಯ್ಕ್ ಮಾತನಾಡಿ, ಯುವಕರಿಗೆ ದಾರಿದೀಪವಾಗುವ ಉದ್ದೇಶದಿಂದ ಈ ತರಬೇತಿಗೆ ಅನುದಾನ ತರಲಾಗಿದೆ. ಶ್ರಮದಿಂದ ತರಬೇತಿಯಲ್ಲಿ ನುರಿತು ಕಂಪನಿಗಳಿಗೆ ಬಲ ತುಂಬಬೇಕು ಎಂದರು.

ಈ ತರಬೇತಿಯ ಆಯೋಜಕರು ಆಶ್ರಯ ಫೌಂಡೇಶನ್ ಸಂಸ್ಥೆ ಸಂಸ್ಥಾಪಕರಾದ ನಾಗರತ್ನ ರಾಮಗೌಡ ಅವರು ಎಲ್ಲ ಶಿಬಿರಾರ್ಥಿಗಳಿಗೆ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಹಾಗೂ ಅವರಿಗೆ ಏನೇ ಸಹಾಯ ಬೇಕಾದರೂ ಆಶ್ರಯ ಫೌಂಡೇಶನ್ ಹಾಗೂ ಭಾರತ ಕುಟುಂಬ ಯೋಜನಾ ಸಂಘದ ಸದಸ್ಯರು ಹಾಗೂ ಸಿಬ್ಬಂದಿಗಳಿಗೆ ತಿಳಿಸಿ ಮಾರ್ಗದರ್ಶನ ಪಡೆದುಕೊಂಡು ಸರಿಯಾಗಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕೆಂದು ವಿನಂತಿಸಿ ಕೊಂಡರು.

ಥರ್ಮೇಕ್ಸ್ ಫೌಂಡೇಶನ್ ಬಯೋಮಾಸ್ ಪ್ಲಾಂಟ ಭೀಮು ರೆಂಟ್ಲೆ, ನಿಖಿಲ್ ಶಿಂಧೆ, ಹಿಂಡಾಲ್ಕೋ ಇಂಡಸ್ಟ್ರಿಸ್ ಕುಬೇರ ಹಾಗೂ ಪ್ರಮಿಳ ಜಗದೀಶ್ ಕಾದರೋಳಿ ಆಶ್ರಯ ಫೌಂಡೇಶನ್ ಸಂಸ್ಥಾಪಕರು ಹಾಗೂ ಭಾರತ ಕುಟುಂಬ ಯೋಜನಾ ಸಂಘದ ಸದಸ್ಯರು ಮತ್ತು ಎಲ್ಲ ಸಿಬ್ಬಂದಿಗಳ ಸಹಾಯದಿಂದ ಈ ಕಾರ್ಯಕ್ರಮವು ಯಶಸ್ವಿಯಾಗಿ ನಡೆಸಲಾಯಿತು ಉಪಸ್ಥಿತರಿದ್ದರು.

# ಬೈಕ್ ಅಡ್ಡಗಟ್ಟಿ 1.50 ಕೋಟಿ ರೂ. ದೋಚಿ ಪರಾರಿಯಾದ ಕಿಡಿಗೇಡಿಗಳು



ಚಿತ್ರದುರ್ಗ: ತಾಲೂಕಿನ ಈಚಲನಾಗೇನಹಳ್ಳಿ ಬಳಿ ಬೈಕ್ನಲ್ಲಿ ತೆರಳುತ್ತಿದ್ದ ವ್ಯಕ್ತಿಯನ್ನು ಅಡ್ಡಗಟ್ಟಿ 1 ಕೋಟಿ 50 ಲಕ್ಷ ದರೋಡೆ ನಡೆದಿದೆ.

ಮಹಮ್ಮದ್ ಇರ್ಫಾನ್ ಹಾಗೂ ಝಾಕೀರ್ ಎಂಬ ವ್ಯಕ್ತಿಗಳು ಬೈಕಲ್ಲಿ ಹಣ ಸಾಗಿಸುತ್ತಿದ್ದಾಗ ಕಾರು ಅಡ್ಡ ಹಾಕಿ ಹಣ ದರೋಡೆ ಮಾಡಿದ್ದಾರೆ.

5 ರಿಂದ 6 ಜನರ ಗ್ಯಾಂಗ್ ಮಾರಕಾಸ್ತ್ರ ತೋರಿಸಿ 1.5 ಕೋಟಿ ಹಣ ದರೋಡೆ ಮಾಡಿದ್ದಾರೆ.

ಹೈದರಾಬಾದ್ನಿಂದ ಹಣ ತಂದು ಊರಿಗೆ ತೆಗೆದುಕೊಂಡು ಹೋಗುವಾಗ ದರೋಡೆ ಆಗಿದೆ. ಅಡಿಕೆ ವ್ಯಾಪಾರಕ್ಕೆ ಸಂಬಂಧಿಸಿ ಹಣ ಅದಾಗಿತ್ತು. ಡಿಸೆಂಬರ್ 4 ರ ಬೆಳಗ್ಗೆ ಹೈದರಾಬಾದ್ನಿಂದ ಹಣ ತೆಗೆದುಕೊಂಡು ಊರಿಗೆ ತೆರಳುತ್ತಿದ್ದಾಗ ಘಟನೆ ನಡೆದಿದೆ.

ತಡವಾಗಿ ದರೋಡೆ ಪ್ರಕರಣ ಬೆಳಕಿಗೆ ಬಂದಿದೆ. ಈಚಲನಾಗೇನಹಳ್ಳಿ ಮಾರ್ಗವಾಗಿ ಹೊಸಹಳ್ಳಿಗೆ ಮಹಮದ್ ಇರ್ಫಾನ್ ತೆರಳುತ್ತಿದ್ದರು. ಚಿತ್ರದುರ್ಗದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಡಿ ಕೆಂಪಣ್ಣ ನೇತೃತ್ವದಲ್ಲಿ ಮುಷ್ಕರ



ಬೆಳಗಾವಿ: ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಗುತ್ತಿಗೆದಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ದೃಷ್ಟಿಯಿಂದ ಗುರುವಾರ ದಿನಾಂಕ 14/12/2023 ರಂದು ಸುವರ್ಣ ಗಾರ್ಡನ್ ಟೆಂಟ್ ನಂ 3 ರಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆ ವರೆಗೆ ಒಂದು ದಿನದ ಮುಷ್ಕರ ಹಮ್ಮಿಕೊಳ್ಳಲಾಗಿದೆ. ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಡಿ ಕೆಂಪಣ್ಣ ನೇತೃತ್ವದಲ್ಲಿ ಮುಷ್ಕರ ನಡೆಯಲಿದೆ. ಈ ಮುಷ್ಕರದಲ್ಲಿ ರಾಜ್ಯ ಸಂಘದ ಪದಾಧಿಕಾರಿಗಳು ಉಪಸ್ಥಿತರಿರುವರು. ಕಾರಣ ಗುತ್ತಿಗೆದಾರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಮುಷ್ಕರದಲ್ಲಿ ಭಾಗವಹಿಸಿ ಗುತ್ತಿಗೆದಾರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೃಷ್ಟಿಯಿಂದ ಮುಷ್ಕರವನ್ನು ಯಶಸ್ವಿಗೊಳಿಸ ಬೇಕೆಂದು ಹಿರಿಯ ಜಿಲ್ಲಾ ಗೌರವದ್ಯಕ್ಷ ಬಸವರಾಜ ಮಟಗಾರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಪತಿ ಅನೈತಿಕ ಸಂಬಂಧಕ್ಕೆ ಪತ್ನಿ ಸಾವು: ದೂರು ದಾಖಲು



ಚಿಕ್ಕಮಗಳೂರು: ಗೃಹಿಣಿಯೊಬ್ಬಳು ಮನೆಯಲ್ಲಿ ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದು, ಪತಿ ಮನೆಯವರು ತರಾತುರಿಯಲ್ಲಿ ಅಂತ್ಯಕ್ರಿಯೆಗೆ ಸಿದ್ಧತೆ ಮಾಡಿರುವ ಘಟನೆ ಮೂಡಿಗೆರೆ ತಾಲೂಕಿನ ದೇವವೃಂದ ಗ್ರಾಮದಲ್ಲಿ ನಡೆದಿದೆ. ಗೃಹಿಣಿ ಪೋಷಕರು ಪತಿ ದರ್ಶನ್ ವಿರುದ್ಧ ಕೊಲೆ ಆರೋಪ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆ ಗೋಣಿಬೀಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶ್ವೇತಾ (31) ಎಂಬಾಕೆ ಪತಿ ಮನೆಯಲ್ಲಿ ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದಳು. ಪತಿ ಮನೆಯವರು ತರಾತುರಿಯಲ್ಲಿ ಅಂತ್ಯಕ್ರಿಯೆಗೆ ಸಿದ್ಧತೆ ನಡೆಸಿದ್ದರು. ಆದರೆ ಗೃಹಿಣಿ ಮನೆಯವರು ಅಂತ್ಯಕ್ರಿಯೆ ತಡೆದು ಶವವನ್ನು ಚಿಕ್ಕಮಗಳೂರು ಮಲ್ಲೇಗೌಡ ಜಿಲ್ಲಾಸ್ಪತ್ರೆಗೆ ರವಾನಿಸಿ ಶವ ಪರೀಕ್ಷೆಗೆ ಸಾಗಿಸಿದ್ದಾರೆ. ಶ್ವೇತಾ ಪತಿ ದರ್ಶನ್ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಲ್ಯಾಬ್ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದು, ಗೃಹಿಣಿ ಮನೆಯವರು ಆತನ ಮೇಲೆ ಇಂಜೆಕ್ಷನ್ ಚುಚ್ಚಿ ಕೊಲೆ ಮಾಡಿದ್ದಾನೆ ಎಂದು ಆರೋಪಿಸಿದ್ದಾರೆ. ಮೂರು ವರ್ಷದ ಹಿಂದೆ ದರ್ಶನ್ ಮತ್ತು ಶ್ವೇತಾ ವಿವಾಹವಾಗಿದ್ದರು. ಕಳೆದ ನಾಲ್ಕು ದಿನದ ಹಿಂದೆ ಬೆಂಗಳೂರಿನಿಂದ ದೇವವೃಂದಕ್ಕೆ ಆಗಮಿಸಿದ್ದರು. ಆದರೆ ಶ್ವೇತಾ ಇದ್ದಕ್ಕಿಂದ್ದತೆಯೇ ಮನೆಯಲ್ಲಿಯೇ ಸಾವನ್ನಪ್ಪಿದ್ದಾಳೆ. ಪತಿ ದರ್ಶನ್ ಪತ್ನಿಯ ಪೋಷಕರಿಗೆ ಕರೆ ಮಾಡಿ ಹಾರ್ಟ್ ಅಟ್ಯಾಕ್ ಆಗಿದೆ ಎಂದು ಹೇಳಿದ್ದಾನೆ.

# ವೇತನ ಹೆಚ್ಚಳಕ್ಕೆ ಆಗ್ರಹಿಸಿ ಅರೆಕಾಲಿಕ ಉಪನ್ಯಾಸಕರ ಪ್ರತಿಭಟನೆ

ಬೆಳಗಾವಿ: ವೇತನ ಹೆಚ್ಚಳಕ್ಕೆ ಆಗ್ರಹಿಸಿ ಅಖಿಲ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಅರೆಕಾಲಿಕ ಉಪನ್ಯಾಸಕರ ಸಂಘದ ಸದಸ್ಯರು ಸುವರ್ಣಸೌಧದ ಬಳಿ ಸುವರ್ಣ ಗಾರ್ಡನ್ ಟೆಂಟನಲ್ಲಿ ಮಂಗಳವಾರ ಪ್ರತಿಬಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಸಂಘದ ಸದಸ್ಯ ಯಶವಂತ ಆರೇರ ಮಾತನಾಡಿ, ರಾಜ್ಯ ಸರ್ಕಾರ 89 ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ 1000 ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಲಕ್ಷಾಂತರ ಬಡ ಪದವಿ ವಿದ್ಯಾರ್ಥಿಗಳಿಗಳ ಭವಿಷ್ಯಕ್ಕಾಗಿ ದುಡಿಯುತ್ತಿದ್ದಾರೆ. 25-30 ವರ್ಷಗಳ ದೀರ್ಘಕಾಲ ವಿದ್ಯಾಭ್ಯಾಸ ಮಾಡಿ ಉನ್ನತ ಅಧ್ಯಯನ ಮಾಡಿರುವ ಈ ಅರೆಕಾಲಿಕ ಉಪನ್ಯಾಸಕರನ್ನು ವರ್ಷಕ್ಕೊಮ್ಮೆ ಅತ್ಯಂತ ಕಡಿಮೆ ವೇತನ ಪಡೆಯುವಂತಹ ಹೀನಾಯ ಮಟ್ಟಕ್ಕೆ ತಳ್ಳಿರುವುದು ನಾಗರಿಕ ಸಮಾಜದಲ್ಲಿ ತಲೆ ತಗ್ಗಿಸುವಂತಹ ವಿಚಾರವಾಗಿದೆ ಎಂದು



ಆರೋಪಿಸಿದರು.

ಅಷ್ಟೇ ಅಲ್ಲದೇ ವರ್ಷಕ್ಕೊಮ್ಮೆ ಅರೆಕಾಲಿಕ ಉಪನ್ಯಾಸಕರ ನೇಮಕಾತಿಯಲ್ಲಿ ಮಾರ್ಪಾಡು ಮಾಡಿಕೊಂಡು ಬರುತ್ತಿರುವುದು ಕೂಡ ಅತ್ಯಂತ ಅಮಾನವೀಯವೂ ಆಗಿದೆ. ರೀತಿಯಲ್ಲಿ ಮಾರ್ಪಾಡು ಮಾಡುತ್ತಿರುವುದರಿಂದ, ಪಾಲಿಟೆಕ್ನಿಕ್ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿರುವ ಅರೆಕಾಲಿಕ ಉಪನ್ಯಾಸಕರಿಗೆ ಭವಿಷ್ಯವಿಲ್ಲದಂತಾಗಿದೆ. ಇದರಿಂದ ಹತಾಶರಾಗಿ ನಾಲ್ಕು ಜನ ಅರೆಕಾಲಿಕ ಉಪನ್ಯಾಸಕರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಂತಹ ಗಂಭೀರ ಸಮಸ್ಯೆಗಳನ್ನು ಸರ್ಕಾರಬಗೆಹರಸಲು ಮುಂದಾಗಬಕು ಎಂದು ಒತ್ತಾಯಿಸಿದರು.

ಕರ್ನಾಟಕ ಸರ್ಕಾರದ ನಡವಳಿಗಳ ಪ್ರಕಾರ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ವೇತನ ಹೆಚ್ಚಳವಾಗಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ242ಡಿಸಿಇ2021 ದಿನಾಂಕ: 15/12/2021 ಹಾಗೂ ತ್ರಿಸದಸ್ಯ ಸಮಿತಿಯವರ ದಿ. 12/01/2021ರ ಪ್ರಕಾರ ವೇತನ ಹೆಚ್ಚಳವಾಗಿರುತ್ತದೆ. ಆದರೆ ತಾಂತ್ರಿಕ ಶಿಕ್ಷಣ ಇಲಾಖೆಗೆ ಒಳಪಡುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ವೇತನದಲ್ಲಿ ಯಾವುದೇ ಹೆಚ್ಚಳವಾಗಿರುವುದಿಲ್ಲ. ಆದ್ದರಿಂದ ದಯವಿಟ್ಟು ಇದನ್ನು ಸರಿಪಡಿಸಬೇಕೆಂದು ಒತ್ತಾಯಾಇಸಿದರು.

ಬೇಡಿಕೆಗಳು: ಪ್ರಣಾಳಿಕೆಯಲ್ಲಿ ಹೇಳಿದಂತೆ ಅರೆಕಾಲಿಕ ಉಪನ್ಯಾಸಕರನ್ನು ಖಾಯಂ ಗೊಳಿಸಿ. 2. ಎ.ಐ.ಸಿ.ಟಿ.ಇ ಯ ನಿಯಮದಂತೆ ತಿಂಗಳಿಗೆ ವೇತನ ನಿಗದಿಗೊಳಿಸಬೇಕು, ಅರೆಕಾಲಿಕ ಉಪನ್ಯಾಸಕರಿಗೆ ಸೇವಾಭದ್ರತೆಯನ್ನು ಒದಗಿಸಬೇಕು, ಉಪನ್ಯಾಸಕರ ನೇಮಕಾತಿಯಲ್ಲಿ ಅರೆಕಾಲಿಕ ಉಪನ್ಯಾಸಕರಿಗೆ ಆದ್ಯತೆ ನೀಡಿ, ಕನಿಷ್ಠ ವರ್ಷಕ್ಕೆ 5 ರಂತೆ ಕೃಪಾಂಕವನ್ನು ನೀಡಬೇಕು, ತಿಂಗಳ ಮೊದಲ ವಾರದಲ್ಲೇ ವೇತನ ಬಿಡುಗಡೆಗೊಳಿಸಬೇಕು. 6. ವರ್ಷದ 12ತಿಂಗಳು ವೇತನ ನೀಡಬೇಕು, ಮಹಿಳಾ ಅರೆಕಾಲಿಕ ಉಪನ್ಯಾಸಕರಿಗೆ ವೇತನ ಸಹಿತ ಹೆರಿಗೆ ರಜೆ ಕನಿಷ್ಠ 3-4 ತಿಂಗಳು ಕೊಡಬೇಕು. 8. ವಯೋಮಿತಿ ಮೀರಿರುವ/ಮೀರುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ಉಪನ್ಯಾಸಕರ ನೇಮಕಾತಿಯಲ್ಲಿ ಆದ್ಯತೆ ನೀಡಬೇಕು, ಪರೀಕ್ಷಾ ಕರ್ತವ್ಯಗಳು,ಪರೀಕ್ಷಾ ಕೊಠಡಿ ಮೇಲ್ವಿಚಾರಕರು, ಮೌಲ್ಯಮಾಪನಗಳು ಹಾಗೂ ಇತರೆ ಕರ್ತವ್ಯಗಳನ್ನು ಒದಗಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ಪ್ರವೀಣಕುಮಾರ ಬೇವಿನಕಟ್ಟಿ, ಹೊನಪ್ಪ ಬೈರೆಡ್ಡಿ ಎಸ್, ರಾಜೇಂದ್ರ ತೆಲ್ಲೂರು, ಶಶಿಕುಮಾರ ಸೇರಿದಂತೆ ನೂರಾರು ಅರೆಕಾಲಿಕ ಉಪನ್ಯಾಸಕರು ಭಾಗವಹಿಸಿದ್ದರು.

# ವೇತನ ಅನುದಾನಕ್ಕೆ ಒತ್ತಾಯಿಸಿ ನೌಕರರ ಒಕ್ಕೂಟ ಧರಣಿ

ಬೆಳಗಾವಿ: ಕನ್ನಡ ಮಾಧ್ಯಮದ 1995ರ ಬಳಿಕ ಆರಂಭವಾದ ಖಾಸಗಿ ಶಾಲಾ, ಕಾಲೇಜುಗಳನ್ನು ವೇತನ ಅನುದಾನಕ್ಕೆ ಒಳಪಡಿಸುವಂತೆ ಒತ್ತಾಯಿಸಿ ಇಲ್ಲಿನ ಸುವರ್ಣಸೌಧದ ಬಳಿ ರಾಜ್ಯ ಅನುದಾನರಹಿತ ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳ ಮತ್ತು ನೌಕರರ ಒಕ್ಕೂಟದ ಪದಾಧಿಕಾರಿಗಳು ಪ್ರತಿಭಟಿಸಿದರು.

ಈ ವೇಳೆ ರಾಜ್ಯ ಅನುದಾನರಹಿತ ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳ ಮತ್ತು ನೌಕರರ ಒಕ್ಕೂಟದ ಮುಖಂಡರು ಮಾತನಾಡಿ, ಸರ್ಕಾರವೇ ರಾಜ್ಯದ ಎಲ್ಲಾ ಭಾಗಗಳಲ್ಲಿ ಶಾಲಾ ಕಾಲೇಜುಗಳನ್ನು ತೆರೆದು ಶಿಕ್ಷಣ ನೀಡಲು ಸಾಧ್ಯವಾಗದ ಕಾರಣ ಖಾಸಗಿಯವರು ಮತ್ತು ಮತ ಮಾನ್ಯದವರು ಶಾಲಾ ಕಾಲೇಜುಗಳನ್ನು ತೆರೆದು ಶಿಕ್ಷಣ ನೀಡುತ್ತಾ ಸರ್ಕಾರದ ಜವಾಬ್ದಾರಿಯನ್ನು ಕಡಿಮೆ ಮಾಡಿವೆ.



ಸುಪ್ರೀಂ ಕೋರ್ಟ್ನ ತೀರ್ಪಿನ ಪ್ರಕಾರ ಶಿಕ್ಷಣ ನೀಡುವ ಎಲ್ಲಾ ವಿದ್ಯಾಸಂಸ್ಥೆಗಳಿಗೆ ಅನುದಾನ ನೀಡಬೇಕಾಗಿರುವುದು ಸರ್ಕಾರದ ಕರ್ತವ್ಯ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷವು ಪ್ರಣಾಳಿಕೆಯಲ್ಲಿ ಪ್ರಕಟಿಸಿದಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಸಂಘಟನೆಗಳ ನಿರ್ವಹಣೆಯಲ್ಲಿರುವ 2012ಕ್ಕಿಂತ ಮೊದಲು ಆರಂಭಿಸಿದ ಪಿ.ಯು. ತನಕದ ಶಿಕ್ಷಣ ಸಂಸ್ಥೆಯನ್ನು ಅನುದಾನ ವ್ಯಾಪ್ತಿಗೆ ತರುವುದು.

ಜೊತೆಗೆ ಸಾಮಾನ್ಯ ವರ್ಗದ ಶಾಲಾ ಕಾಲೇಜುಗಳನ್ನು ವೇತಾನಾನುದಾನಕ್ಕೆ ಒಳಪಡಿಸುವುದು ಹಾಗೂ ಕರ್ನಾಟಕ ರಾಜ್ಯದಲ್ಲಿ ಎಲ್ಲಾ ಭಾಗ್ಯಗಳನ್ನು ನೀಡಿರುವ ಕಾಂಗ್ರೆಸ್ ಸರ್ಕಾರ ನಮಗೆ ಅನುದಾನ ಭಾಗ್ಯವನ್ನು ನೀಡಿ, ರಾಜ್ಯಾದಾದ್ಯಂತ 28 ವರ್ಷಗಳ ನ್ಯಾಯಯುತ ಬೇಡಿಕೆಯಾದ 1995 ರಿಂದ 2005 ರವರೆಗೆ ಪ್ರಾರಂಭವಾದ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ವೇತನಾನುದಾನವನ್ನು ದೊರಕಿಸಿ ಕನ್ನಡ ಭಾಷೆಯ ಉಳಿವಿಗೆ ಒತ್ತು ನೀಡಿ, ಈ ಶಾಲಾ ಕಾಲೇಜುಗಳಲ್ಲಿ ಕೆಲಸ ಮಾಡುವ ಸಾವಿರಾರು ಶಿಕ್ಷಕರ ಬದುಕಿಗೆ ಹಾಗೂ ವ್ಯಾಸಂಗ ಮಾಡುತ್ತಿರುವ ಲಕ್ಷಾಂತರ ಬಡ ಮಕ್ಕಳಿಗೆ ಆಸರೆಯಾಗಬೇಕೆಂದು ಆಗ್ರಹಿಸಿದರು.

# ನೂತನ ಬಸ್ ಆರಂಭ




ಕೆಂಭಾವಿ: ಬಸವಕಲ್ಯಾಣದಿಂದ ಬಾಗಲಕೋಟ ನಗರಕ್ಕೆ ಕೆಂಭಾವಿ ಮಾರ್ಗವಾಗಿ ನೂತನ ಬಸ್ ಆರಂಭಿಸಲಾಗಿದ್ದು ಪ್ರಯಾಣಿಕರು ಸದುಪಯೋಗ ಪಡಿಸಿಕೊಳ್ಳುವಂತೆ ವಿಭಾಗೀಯ ನಿಯಂತ್ರಣಾಧೀಕಾರಿ ಎಸ್. ಎಚ್. ಪುಲೇಕರ್ ತಿಳಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು ಈ ನೂತನ ಬಸ್ ಬಸವಕಲ್ಯಾಣದಿಂದ ಬೆಳಿಗ್ಗೆ 10 ಗಂಟಗೆ ಹೊರಟು ಕಲಬುರಗಿ, ಶಹಾಪೂರ, ಕೆಂಭಾವಿ, ಪೀರಾಪೂರ, ತಾಳಿಕೋಟ, ಮುದ್ದೇಬಿಹಾಳ, ಆಲಮಟ್ಟಿ ಮಾರ್ಗವಾಗಿ ಬಾಗಲಕೋಟ ತಲುಪಲಿದೆ. ಇದೇ ಮಾರ್ಗವಾಗಿ ಬೆಳಿಗ್ಗೆ 6 ಗಂಟೆಗೆ ಬಾಗಲಕೋಟ ನಗರದಿಂದ ಹೊರಟು ಬಸವಕಲ್ಯಾಣಕ್ಕೆ 4 ಗಂಟೆಗೆ ತಲುಪಲಿದೆ ಎಂದು ತಿಳಿಸಿದ್ದಾರೆ.

ಈ ಭಾಗದ ಪ್ರಯಾಣಿಕರ ಬಹು ದಿನಗಳ ಬೇಡಿಕೆಯಾಗಿದ್ದ ಈ ಮಾರ್ಗದ ಬಸ್ ಓಡಿಸಲು ಸಹಕರಿಸಿದ ಇಲಾಖೆಯ ಎಲ್ಲ ಮೇಲಾಧಿಕಾರಿಗಳಿಗೆ ನಾಗರಿಕ ಹಿತ ರಕ್ಷಣಾ ಸಮಿತಿಯ ಅಧ್ಯಕ್ಷ ಸಂಜೀವರಾವ ಕುಲಕರ್ಣಿ, ಉಪಾಧ್ಯಕ್ಷ ನೂರುಲ್ಲಾಖಾನ (ಬಾಬಾ) ಹಾಗೂ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಯಶಸ್ವಿ ಮೂತ್ರ ಪಿಂಡ ಕಸಿ ಚಿನ್ನದ ಮಾನದಂಡಕ್ಕೆ ಬಿಜಿಎಸ್ ಗ್ಲೆನಿಗಲ್ಸ್ ಆಸ್ಪತ್ರೆ



ಮಂಗಳೂರು: ಬೆಂಗಳೂರಿನ ಬಿಜಿಎಸ್ ಗ್ಲೆನಿಗಲ್ಸ್ ಆಸ್ಪತ್ರೆ 800 ಮೂತ್ರಪಿಂಡ ಕಸಿಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಈಮೂಲಕ ಮಹತ್ವದ ಮೈಲಿಗಲ್ಲು ಸ್ಥಾಪಿಸಿದೆ. ದೇಶದಲ್ಲಿ ವೈದ್ಯಕೀಯ ಶ್ರೇಷ್ಠತೆಗೆ ಮತ್ತು ಚಿನ್ನದಮಾನದಂಡಕ್ಕೆ ಪಾತ್ರವಾಗಿದೆ.

ಮೂತ್ರಪಿಂಡ ತಜ್ಞ ಡಾ.ಅನಿಲ್ ಕುಮಾರ್ ಬಿ.ಟಿ., ಮೂತ್ರಶಾಸ್ತ್ರ ಜ್ಞ ಡಾ.ನರೇಂದ್ರಎಸ್. ಅವರ ದೂರದೃಷ್ಟಿಯ ನಾಯಕತ್ವದಡಿ ಅತ್ಯಾಧುನಿಕ ಚಿಕಿತ್ಸೆ ಜೊತೆಗೆ ಮೂತ್ರಪಿಂಡ ಕಸಿಕ್ಷೇತ್ರದಲ್ಲಿ ಜಗತ್ತಿನಾದ್ಯಂತ ಲಭ್ಯವಿರುವ ಸುಧಾರಿತಕ್ರಮಗಳನ್ನು ಅಳವಡಿಸಿಕೊಳ್ಳುವ ಮೂಲಕ ದೊಡ್ಡಜಿಗಿತ ಸಾಧಿಸಿದೆ.

ಈ ಕುರಿತು ಮುಖ್ಯ ಕಸಿಶಾಸ್ತ್ರ ಮತ್ತು ಮೂತ್ರಪಿಂಡ ತಜ್ಞ ಅನಿಲ್ ಕುಮಾರ್ ಬಿ ಟಿ, ಮಾತನಾಡಿ, ರೋಗಿ ಕೇಂದ್ರಿತ ಆರೈಕೆ ಪ್ರಮುಖವಾಗಿದ್ದು,ವೈಯಕ್ತಿಕ ಚಿಕಿತ್ಸೆಯಿಂದ ಹಿಡಿದು ಶಸ್ತ್ರ ಚಿಕಿತ್ಸೆ ನಂತರದವರೆಗೆ ನಮ್ಮರೋಗಿಗಳ ಯೋಗ ಕ್ಷೇಮಕ್ಕೆ ಒತ್ತು ನೀಡಲಾಗಿದೆ.ಇದು ಕೇವಲ ಕಸಿಯಲ್ಲ. ಬದಲಿಗೆ ಬದುಕಿನಲ್ಲಿ ಸಹಾನುಭೂತಿ ಮತ್ತು ಪರಿವರ್ತನೆಗೆ ಕಾರಣವಾಗಿದೆ ಎಂದರು. ಮೂತ್ರಶಾಸ್ತ್ರಜ್ಞ ಡಾ.ನರೇಂದ್ರ ಎಸ್. ಮಾತನಾಡಿ," ಶಸ್ತ್ರ ಚಿಕಿತ್ಸಾ ಪರಿಣತಿ ಮತ್ತು ಅತ್ಯಾಧುನಿಕ ತಂತ್ರಜ್ಞಾನದ ಪರಿಪೂರ್ಣಸಾಮರಸ್ಯದಿಂದ ಈ ಯಶಸ್ಸು ಸಾಧಿಸಲು ಸಾಧ್ಯವಾಗಿದೆ. ನಾವು ಅತ್ಯಾಧುನಿಕ ಅಂದರೆ ಅಸಾಧಾರಣ ಪ್ರಕ್ರಿಯೆಯನ್ನು ಅನುಸರಿಸುತ್ತಿದ್ದೇವೆ.

ನಾವು ವೈದ್ಯಕೀಯ ನಾವೀನ್ಯತೆಯಲ್ಲಿ ಮಂಚೂಣಿಯಲ್ಲಿದ್ದು, ನಮ್ಮ ರೋಗಿಗಳು ನಮ್ಮ ಮೇಲೆ ನಂಬಿಕೆ ಇಟ್ಟಿದ್ದಾರೆ ಎಂದರು.

ಬೆಂಗಳೂರಿ ನಗ್ಲೆನಿಗಲ್ಸ್ ಆಸ್ಪತ್ರೆಯ ಸಿಒಒ ಬಿಜುನಾಯರ್ ಮಾತನಾಡಿ, ಚಿಕಿತ್ಸೆಯಲ್ಲಿ ಅಸಾಧಾರಣ ಕ್ರಮಗಳನ್ನು ಅನುಸರಿಸಿದ ಕಾರಣ ಉತ್ತಮ ಫಲಿತಾಂಶ ಬಂದಿದೆ ಎಂದರು.

ರೋಗಿಗಳನ್ನುಆರೋಗ್ಯ ಕೇಂದ್ರದಲ್ಲಿ ಇರಿಸುವ ಮೂಲಕ ಆಸ್ಪತ್ರೆಯು ಅಚಲಬದ್ಧತೆ ಹೊಂದಿದ್ದು, ಇದು ವೈಯಕ್ತಿಕ ಮತ್ತು ಸಹಾನುಭೂತಿ ಆರೈಕೆಯನ್ನು ಖಚಿತಪಡಿಸಿದೆ. ಸಾಧ್ಯವಾದಷ್ಟು ಉತ್ತಮ ಫಲಿತಾಂಶಗಳನ್ನು ಒದಗಿಸುತ್ತದೆ, ಪರಿಣಿತರ ತಂಡ ಹೊಂದಿದೆ,

ಪಾರದರ್ಶಕತೆ ಮತ್ತು ನಂಬಿಕೆ ಜೊತೆಗೆ ಯೋಗಕ್ಷೇಮಕ್ಕೆ ಆದ್ಯತೆ ನೀಡಲಾಗುತ್ತಿದೆ.

ಬೆಂಗಳೂರು ಬಿಜಿಎಸ್ ಗ್ಲೆನಿಗಲ್ಸ್ ಆಸ್ಪತ್ರೆ ರಾಜ್ಯ ಸರ್ಕಾರ, ಜೀವ ಸಾರ್ಥಕತೆ ಸಂಸ್ಥೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಮತ್ತು ರಾಜ್ಯ ಆರೋಗ್ಯ ಸಚಿವಾಲಯಕ್ಕೆ ಸೂಕ್ತ ರೀತಿಯಲ್ಲಿ ಬೆಂಬಲ ನೀಡುತ್ತಿದೆ.

# ನಮ್ಮನ್ನು ಸಂತೈಸಿ, ಮಾರ್ಗದರ್ಶನ ಮಾಡಬಲ್ಲ ಶಕ್ತಿ ಸಾಹಿತ್ಯಕ್ಕೆ: ಡಾ. ಎಂ.ಸಿ ಸುಧಾಕರ್

## ಡಾ. ವಿಜಯಲಕ್ಷ್ಮಿ ತಿರ್ಲಾಪುರ ಅವರ ಕವನ ಸಂಕಲನ ಲೋಕಾರ್ಪಣೆಗೊಳಿಸಿದ ಸಚಿವರು



ಬೆಳಗಾವಿ: "ಪುಸ್ತಕಗಳು ಮತ್ತು ಸಾಹಿತ್ಯ ನಮ್ಮೆಲ್ಲರ ಅತ್ಯುತ್ತಮ ಸಂಗಾತಿ, ಜೀವನದ ಪ್ರತಿಯೊಂದು ಹೆಜ್ಜೆಯಲ್ಲೂ ನಮ್ಮನ್ನು ಸಂತೈಸಬಲ್ಲ, ನಮಗೆ ಮಾರ್ಗದರ್ಶನ ಮಾಡಬಲ್ಲ, ಶಕ್ತಿ ಸಾಹಿತ್ಯಕ್ಕೆ ಇದೆ" ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಹೇಳಿದರು.

ನಗರದ ಸುವರ್ಣಸೌಧದ ಸಭಾಂಗದಲ್ಲಿ ಆಯೋಜಿಸಲಾದ ಹಾವೇರಿ ವಿಶ್ವವಿದ್ಯಾಲಯ ಕುಲಸಚಿರಾದ ಡಾ. ವಿಜಯಲಕ್ಷ್ಮಿ ತಿರ್ಲಾಪುರ, (ಪುಟ್ಟಿ), ಇವರ "ಊರ್ಮಿಳಾಸ್ ಸೋಲಿಲೋಕಿ" (ಊರ್ಮಿಳೇಯ ಸ್ವಗತ) ಇಂಗ್ಲೀಷ್ ಕವನ ಸಂಕಲನವನ್ನು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಅವರು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು,

ಆದರೆ, ಎಲ್ಲ ಬಲ್ಲವರಿಲ್ಲ, ಬಲ್ಲವರು ಬಹಳಿಲ್ಲ, ಬಲ್ಲವರು ಇದ್ದು ಬಲವಿಲ್ಲ ಸಾಹಿತ್ಯ ಎಲ್ಲರಿಗಿಲ್ಲ ಸರ್ವಜ್ಞ, ಎನ್ನುವ ಮಾತಿನ ಪ್ರಕಾರ ಸಾಹಿತ್ಯದ ನಿರ್ಮಾಣ ಎಲ್ಲರಿಗೂ ಸಾಧ್ಯವಿಲ್ಲ. ಆದರೆ, ಡಾ. ವಿಜಯಲಕ್ಷ್ಮಿ ತಿರ್ಲಾಪುರವರು ವೃತ್ತಿಯಿಂದ ಕುಲಸಚಿವರಾಗಿದ್ದರೂ ಕೂಡ ಪ್ರವೃತ್ತಿಯಿಂದ ಬರವಣಿಗೆಯಲ್ಲಿಯೂ ಕೂಡ ತೊಡಗಿಸಿಕೊಳ್ಳುತ್ತಾ ಅವರೊಬ್ಬ ಉತ್ತಮ ಸಾಹಿತಿ ಎನ್ನುವುದನ್ನು ನಿರೂಪಿಸಿದ್ದಾರೆ. ಅವರ ಈ ಪುಸ್ತಕವನ್ನು ಲೋಕಾರ್ಪಣೆಗೊಳಿಸಲು ನನಗೆ ಅತೀವ ಸಂತೋಷವಾಗುತ್ತಿದೆ, ಅವರಿಂದ ಮತ್ತಷ್ಟು ಉತ್ತಮ ಕೃತಿಗಳು ಹೊರಬರಲಿ" ಎಂದು ಹೇಳಿದರು.

ನಿವೃತ್ತ ಆಂಗ್ಲ ಪ್ರಾಧ್ಯಾಪಕರು ಖ್ಯಾತ ಸಾಹಿತಿಗಳು ಡಾ. ಗುರುದೇವಿ ಹುಲೆಪ್ಪನವರಮಠ ಅವರು ಮಾತನಾಡಿ, ಕನ್ನಡ ಮತ್ತು ಇಂಗ್ಲಿಷ್ ಎರಡು ಭಾಷೆಗಳನ್ನು ಸಮರ್ಥವಾಗಿ ಸಮರ್ಪಕವಾಗಿ ಬಳಸಿಕೊಂಡು ಸಾಹಿತ್ಯ ನಿರ್ಮಾಣ ಮಾಡುತ್ತಿದ್ದೀರಿ, ಇಂತಹ ಸಾಧ್ಯತೆ ತುಂಬಾ ವಿರಳ, ಇದಕ್ಕಾಗಿ ಬಹಳಷ್ಟು ಸಮಯ ತೆಗೆದುಕೊಂಡು ಸಾಹಿತ್ಯ ನಿರ್ಮಾಣ ಮಾಡಿದ್ದಿರಿ, ನಮ್ಮ ಜೀದನ ಶೈಲಿ ಉತ್ತಮವಾಗಿ ಮೂಡಿಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿದರು.

ಪ್ರಸ್ತುತ ಇಂಗ್ಲಿಷ್ ಕವನ ಸಂಕಲನದಲ್ಲಿ ಇವತ್ತಿನ ಅನೇಕ ಸಾಮಾಜಿಕ ಭಿನ್ನತೆಗಳು ಮತ್ತು ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವಂತ, ಅದ್ಭುತ " ರಿದಮ್" ಹೊಂದಿದ ಕವನಗಳನ್ನು ರಚಿಸಿದ್ದೀರಿ ಎಂದರು. ಬಳಿಕ ಖ್ಯಾತ ಸಾಹಿತಿಗಳು ಡಾ. ಗುರುದೇವಿ ಹುಲೆಪ್ಪನವರಮಠ ಅವರು ಡಾ. ವಿಜಯಲಕ್ಷ್ಮಿ ಪುಟ್ಟಿಯವರನ್ನು ಅಭಿನಂದಿಸಿ, ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಈ ಕವನ ಸಂಕಲನಕ್ಕೆ ಮುನ್ನುಡಿ ಬರೆದ ಡಾ. ರವಿ ತಿರ್ಲಾಪೂರ ಕೆಎಎಸ್ ಅಧಿಕಾರಿ ಬೆಂಗಳೂರು, ಮಹಾಂತೇಶ್ ಪುಟ್ಟಿ ಮುಖ್ಯ ಅಭಿಯಂತರರು, ಆಕಾಶ್ ಪುಟ್ಟಿ ಸಾಫ್ಟ್ವೇರ್ ಇಂಜಿನಿಯರ್ ಪುಣೆ ಮತ್ತು ಇತರರು ಉಪಸ್ಥಿತರಿದ್ದರು.

# ಐನಾಕ್ಸ್ ಇಂಡಿಯಾ ಲಿಮಿಟೆಡ್ ಐಪಿಒ




ಹುಬ್ಬಳ್ಳಿ: ಐನಾಕ್ಸ್ ಇಂಡಿಯಾ ಲಿಮಿಟೆಡ್ ("ಕಂಪನಿ"), ತನ್ನ ಇಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು ಡಿಸೆಂಬರ್ 14, 2023 ರಂದು ತೆರೆಯುತ್ತದೆ.

ಕೊಡುಗೆಯು ಗುರುವಾರ, ಡಿ. 14, 2023 ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಸೋಮವಾರ, ಡಿ. 18, 2023 ರಂದು ಮುಕ್ತಾಯವಾಗುತ್ತದೆ.

ಆಫರ್ನ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ 627 ರಿಂದ ರೂ 660 ಕ್ಕೆ ನಿಗದಿಪಡಿಸಲಾಗಿದೆ. ಕನಿಷ್ಠ 22 ಈಕ್ವಿಟಿ ಷೇರುಗಳಿಗೆ ಮತ್ತು 22 ಇಕ್ವಿಟಿ ಷೇರುಗಳ ಗುಣಕಗಳಲ್ಲಿ ಬಿಡ್ಗಳನ್ನು ಮಾಡಬಹುದು.

ಒಟ್ಟು 22,110,955 ಈಕ್ವಿಟಿ ಷೇರುಗಳ ಮಾರಾಟದ ಮೂಲಕ ಹೂಡಿಕೆದಾರರಿಂದ ಹಣ ಸಂಗ್ರಹಿಸಲು ಕಂಪನಿಯು ಯೋಜಿಸಿದೆ.

ಮಾರಾಟದ ಕೊಡುಗೆಯು ಸಿದ್ಧಾರ್ಥ್ ಜೈನ್ ಅವರ 10,437,355 ಇಕ್ವಿಟಿ ಷೇರುಗಳನ್ನು ಒಳಗೊಂಡಿದೆ, ಪವನ್ ಕುಮಾರ್ ಜೈನ್ ಅವರ 5,000,000 ಈಕ್ವಿಟಿ ಷೇರುಗಳು, ನಯನತಾರಾ ಜೈನ್ ಅವರ 5,000,000 ಈಕ್ವಿಟಿ ಷೇರುಗಳು, ಇಶಿತಾ ಜೈನ್ ಅವರ 1,200,000 ವರೆಗೆ ಈಕ್ವಿಟಿ ಷೇರುಗಳು, (ಪ್ರವರ್ತಕರ ಷೇರು ಮಾರಾಟ) ಮಂಜು ಜೈನ್ ಅವರ 230,000 ವರೆಗೆ ಈಕ್ವಿಟಿ ಷೇರುಗಳು, ಲತಾ ರುಂಗ್ಟಾ ಅವರಿಂದ 190,000 ವರೆಗೆ ಈಕ್ವಿಟಿ ಷೇರುಗಳು, ಭಾರತಿ ಶಾ ಅವರಿಂದ 13,400 ಈಕ್ವಿಟಿ ಷೇರುಗಳು, ಕುಮುದ್ ಗಂಗ್ವಾಲ್ ಅವರಿಂದ 13,400 ಈಕ್ವಿಟಿ ಷೇರುಗಳು, ಸುಮನ್ ಅಜ್ಮೇರ ಅವರ 13,400 ಷೇರುಗಳು ರಜನಿ ಮೊಹಟ್ಟಾ ಅವರಿಂದ 13,400 ಷೇರುಗಳು ("ಇತರ ಮಾರಾಟದ ಷೇರುದಾರರು", ಜೊತೆಗೆ "ಮಾರಾಟ ಷೇರುದಾರರು" ಎಂದು ಉಲ್ಲೇಖಿಸಲಾದ ಪ್ರವರ್ತಕ ಮಾರಾಟದ ಷೇರುದಾರರು) ಈ ಮಾರಾಟದಲ್ಲಿ ಒಳಗೊಂಡಿದೆ.

ಇಕ್ವಿಟಿ ಷೇರುಗಳನ್ನು ಡಿ. 8, 2023 ರ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುತ್ತಿದೆ, ತಿದ್ದುಪಡಿಯೊಂದಿಗೆ ಅಹಮದಾಬಾದ್ನಲ್ಲಿ ಗುಜರಾತ್ನ ರಿಜಿಸ್ಟ್ರಾರ್ ಆಫ್ ಕಂಪನೀಸ್ಗೆ ಮತ್ತು ಸೆಬಿಗೆ ಸಲ್ಲಿಸಿದ ಡಿ. 9, 2023 ದಿನಾಂಕದ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ನೊಂದಿಗೆ ಓದಿ.

ಆರ್ಎಚ್ಪಿ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ("ಎನ್ಎಸ್ಇ") ಸ್ಟಾಕ್ ಎಕ್ಸ್ಚೇಂಜ್ಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಆಫರ್ನ ಉದ್ದೇಶಗಳಿಗಾಗಿ, ಬಿಎಸ್ಇ ಗೊತ್ತುಪಡಿಸಿದ ಸ್ಟಾಕ್ ಎಕ್ಸ್ಚೇಂಜ್ ಆಗಿದೆ. ನಮ್ಮ ಕಂಪನಿಯು ಕ್ರಮವಾಗಿ ಅಕ್ಟೋಬರ್ 25, 2023 ಮತ್ತು ಅಕ್ಟೋಬರ್ 23, 2023 ರ ದಿನಾಂಕದ ಪತ್ರಗಳಿಗೆ ಅನುಗುಣವಾಗಿ ಈಕ್ವಿಟಿ ಷೇರುಗಳ ಪಟ್ಟಿಗಾಗಿ **BSE** ಮತ್ತು NSE ನಿಂದ 'ತಾತ್ವಿಕ' ಅನುಮೋದನೆಗಳನ್ನು ಪಡೆದುಕೊಂಡಿದೆ.

# ಅಖಂಡ ಬೆಳಗಾವಿ ಜಿಲ್ಲೆ ಆಗ್ರಹಿಸಿ ಬೈಲಹೊಂಗಲದಲ್ಲಿ ಪ್ರತಿಭಟನೆ




ಬೈಲಹೊಂಗಲ: ಅಖಂಡ ಬೆಳಗಾವಿ ಜಿಲ್ಲೆ ಆಗ್ರಹಿಸಿ ಬೈಲಹೊಂಗಲ ಜಿಲ್ಲಾ ಹೋರಾಟ ಸಮಿತಿ ಅಧ್ಯಕ್ಷ ಶಿವರಂಜನ ಬೋಳನ್ನವರ ನೇತೃತ್ವದಲ್ಲಿ ಪಟ್ಟಣದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ಜಿಲ್ಲಾ ಹೋರಾಟ ಸಮಿತಿ ಅಧ್ಯಕ್ಷ ಶಿವರಂಜನ ಬೋಳನ್ನವರ ಮಾತನಾಡಿ, ಸರಕಾರ ಬೆಳಗಾವಿ ಜಿಲ್ಲೆಯನ್ನು ಅಖಂಡವಾಗಿಡಬೇಕು, ಜಿಲ್ಲೆ ವಿಭಜನೆ ಯಾಗುವುದಾದರೆ ಉಪ ವಿಭಾಗ ಕೇಂದ್ರಗಳನ್ನು ಜಿಲ್ಲಾ ಕೇಂದ್ರಗಳನ್ನಾಗಿ ಘೋಷಣೆ ಮಾಡಬೇಕು,ಇಲ್ಲವಾದಲ್ಲಿ ಸರಕಾರ ಉಗ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಸರ್ಕಾರಕ್ಕೆ ಸರಕಾರಕ್ಕೆ ಎಚ್ಚರಿಕೆ ನೀಡದರು.

ಶಾಖಾ ಮುರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ, ವೇದಮೂರ್ತಿ ಡಾ. ಮಹಾಂತಯ್ಯಾ ಶಾಸ್ತ್ರೀ ಆರಾದ್ರಿಮಠ ಪ್ರತಿಬಟನೆ ಸಾನಿಧ್ಯ ವಹಿಸಿದ್ದರು.

ಪ್ರತಿ ಬಟನೆಯಲ್ಲಿ ಮುಖಂಡರಾದ ಮಹಾಂತೇಶ ತುರಮರಿ,ವಿರೂಪಾಕ್ಷ ವಾಲಿ, ಮಹಾಂತೇಶ ಮತ್ತಿಕೊಪ್ಪ,ರಾಜು ಕೂಡಸೋಮಣ್ಣವರ, ಸೋಮನಾಥ ಸೊಪ್ಪಿಮಠ, ಶ್ರೀಶೈಲ ಯಡಳ್ಳಿ, ಸುಭಾಷ್ ತುರಮರಿ, ರವಿ ತುರಮರಿ ಹಾಗೂ ಬೈಲಹೊಂಗಲ ಜಿಲ್ಲಾ ಹೋರಾಟ ಸಮಿತಿ ಮುಖಂಡರು ಇದ್ದರು.

# ಪೊಲೀಸರ ಭರ್ಜರಿ ಭೇಟೆ: ವಿದೇಶಿ ಪ್ರಜೆ ಸಮೇತ, 21 ಕೋಟಿ ರೂ. ಡ್ರಗ್ಸ್ ವಶಕ್ಕೆ



ಬೆಂಗಳೂರು: ನಗರ ಸಿಸಿಬಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಓರ್ವ ಆಫ್ರಿಕಾ ಮೂಲದ ಪ್ರಜೆಯನ್ನ ಬಂಧಿಸಿದ್ದಾರೆ. ಆತನಿಂದ 21 ಕೋಟಿ ಬೆಲೆ ಬಾಳುವ ಡ್ರಗ್ಸ್ ವಶಕ್ಕೆ ಪಡೆದುಕೊಂಡಿದ್ದಾರೆ.

ಹೊಸ ವರ್ಷಕ್ಕೆ ಮತ್ತೇರಿಸಲು ಬಂದಿದ್ದ ಡ್ರಗ್ಸ್ ಅನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಆಫ್ರಿಕಾ ಮೂಲದ ಪ್ರಜೆಯಿಂದ 16 ಕೆಜಿ ಎಂಡಿಎಂಎ 500 ಗ್ರಾಂ ಕೊಕೇನ್ ವಶಕ್ಕೆ ಪಡೆದುಕೊಂಡಿದ್ದಾರೆ.

ವಿದೇಶಿ ಪ್ರಜೆ ರಾಮಮೂರ್ತಿನಗರದಲ್ಲಿ ವಾಸವಿದ್ದು, ಬ್ಯುಸಿನೆಸ್ ವೀಸಾದ ಮೇಲೆ ಬೆಂಗಳೂರಿಗೆ ಬಂದಿದ್ದಾನೆ. ಬೆಡ್ ಶೀಟ್ ಕವರ್, ಸೋಪ್ ಬಾಕ್ಸ್, ಚಾಕಲೇಟ್ ಬಾಕ್ಸ್ ನಲ್ಲಿ ಡ್ರಗ್ಸ್ ಇಟ್ಟಿದ್ದನು. ಹೊಸ ವರ್ಷದ ರೇವ್ ಪಾರ್ಟಿಗಳಿಗೆ ಡ್ರಗ್ ಸೇಲ್ ಮಾಡಲು ಶೇಖರಣೆ ಮಾಡಿಟ್ಟಿದ್ದನು.

ಇನ್ನು ಆಫ್ರಿಕಾ ಮೂಲದ ಪ್ರಜೆ ಕೊರಿಯರ್ ಮೂಲಕ ಡ್ರಗ್ ತರಿಸಿಕೊಳ್ತಿದ್ದ ಎಂದು ನಗರ ಪೊಲೀಸ್ ಆಯುಕ್ತ ಬಿ ದಯಾನಂದ್ ಹೇಳಿದ್ದಾರೆ.

# ಸೇವಾ ಭದ್ರತೆ, ವೇತನ ಹೆಚ್ಚಳ ನೀಡುವಂತೆ ಆಗ್ರಹಿಸಿ ಇಂಜಿನಿಯರಿಂಗ್ ಉಪನ್ಯಾಸಕರಿಂದ ಪ್ರತಿಭಟನೆ



ಬೆಳಗಾವಿ: ಅರೆಕಾಲಿಕ ಇಂಜಿನಿಯರಿಂಗ್ ಉಪನ್ಯಾಸಕರಿಗೆ ಸೇವಾ ಖಾಯಂತಿ, ಸೇವಾ ಭದ್ರತೆ ಹಾಗೂ ವೇತನ ಹೆಚ್ಚಳ ನೀಡುವಂತೆ ಆಗ್ರಹಿಸಿ ಅಖಿಲ ಕರ್ನಾಟಕ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರ ಕ್ಷೇಮಾಭಿವೃದ್ಧಿ ಸಂಘಟನೆಯಿಂದ ಸುವರ್ಣಸೌಧ ಎದುರು ನಿರ್ಧಿಷ್ಟಾವಧಿವರೆಗೂ ಪ್ರತಿಭಟನೆ ನಡೆಸಲಾಯಿತು.

ಲಕ್ಷಾಂತರ ಹಣ ವ್ಯಯ ಮಾಡಿ, ಸಾಲ ಸೂಲ ಮಾಡಿ ಇಂಜಿನಿಯರಿಂಗ್ ಪದವಿ ಪಡೆದು, ಮತ್ತೆ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಲಾಗುತ್ತಿದೆ.

ಆದರೆ, ಸರ್ಕಾರ ಶಿಕ್ಷಕರಿಗೆ ಸೂಕ್ತ ವೇತನ ನೀಡುತ್ತಿಲ್ಲ, ಅತ್ಯಂತ ಕಡಿಮೆ ಗೌರವ ಧನ 15 ಸಾವಿರ ರೂಗಳಲ್ಲಿ ಸೇವೆಯನ್ನು ಸಲ್ಲಿಸುತ್ತಿದ್ದೇವೆ. ಸರ್ಕಾರ ನಮ್ಮ ಬೇಡಿಕೆ ಶೀಘ್ರವೇ ಈಡೇಸಬೇಕು ಎಂದು ಮನವಿ ಮಾಡಿಕೊಂಡರು.

ಸರ್ಕಾರಗಳು ಮಲತಾಯಿ ಧೋರಣೆ ತೋರುತ್ತಿವೆ.

ಬುದ್ಧಿವಂತರನ್ನು ಬೀದಿಯಲ್ಲಿ ನಿಲ್ಲಿಸುತ್ತಿವೆ. ಶಿಕ್ಷಕದ ಮೌಲ್ಯ ಯಾವ ಸರ್ಕಾರಗಳಿಗೆ ಅರಿವು ಆಗುತ್ತಿಲ್ಲ ಹೀಗಾಗಿ, ಸಿಎಂ ಸಿದ್ದರಾಮಯ್ಯನವರ ಸರ್ಕಾರ ಜನಪರ ಸರ್ಕಾರ ಎಂದು ಭರವಸೆ ಇಟ್ಟಿದ್ದೆನೆ.

ಅರೆಕಾಲಿಕ ಇಂಜಿನಿಯರಿಂಗ್ ಉಪನ್ಯಾಸಕರಿಗೆ ಸೇವಾ ಖಾಯಂತಿ, ಸೇವಾ ಭದ್ರತೆ ನೀಡಿದರೆ ನಮ್ಮಗೆ ಆಸರೆಯಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಮಕ್ಕಳಿಗಾಗಿ ಆಸರೆ: ನ.29 ಬುಧವಾರದಿಂದ ಅನಿರ್ಧಿಷ್ಟಾವಧಿವರೆಗೂ ಯಾವುದೇ ತರಗತಿಗಳನ್ನು ತೆಗೆದುಕೊಳ್ಳದೇ ಮೌನವಾಗಿ ನಮ್ಮ ಮನಸ್ಸಿನ ನೋವುನ್ನು ಹೊರಹಾಕದ್ದೆವೆ.

ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮನವಿಯನ್ನು ಕೂಡಲೇ ಸರ್ಕಾರ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಗಮನಕ್ಕೆ ತರಬೇಕೆಂದು ಮನವಿಯಲ್ಲಿ ಕೇಳಿಕೊಂಡರು.

# ಬೇರೆಯವರನ್ನ ನೋಡಿ ನಗುವುದು ಮಹಾಪಾಪ



ಬೆಳಗಾವಿ: ನಾವು ನಗಬೇಕು, ನಗಿಸಬೇಕು ಆದರೆ ಬೇರೆಯವರನ್ನ ನೋಡಿ ನಗುವುದು ಮಹಾಪಾಪದ ಕೆಲಸ ಎಂದು ಹಿರಿಯ ಲೇಖಕ ಪಿ. ಬಿ. ಸ್ವಾಮಿಯವರು ಇಂದಿಲ್ಲಿ ಹೇಳಿದರು

ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಹಾಸ್ಯ ಕವನ, ಹನಿಗವನ ಗೋಷ್ಠಿ" ಯ ಅಧ್ಯಕ್ಷತೆಯನ್ನು ವಹಿಸಿದ್ದ ಸ್ವಾಮಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು. ಮುಂದೆ ಮಾತನಾಡುತ್ತ ಸ್ವಾಮಿಯವರು, ಕವನಕ್ಕೆ ಕೇವಲ ಪ್ರಾಸವಿದ್ದರೆ ಸಾಲದು ಅವಗಳಲ್ಲಿ ಸಮಾಜಿಕ ಕಳಕಳಿ, ಸಂದೇಶವಿದ್ದಾಗ ಮಾತ್ರ ಅದೊಂದು ಪರಿಪೂರ್ಣ ಕವನವೆನ್ನಿಸಿಕೊಳ್ಳುತ್ತದೆ ಎಂದು ಹೇಳಿದರು. ಅತಿಥಿಗಳಾಗಿ ಆಗಮಿಸಿದ್ದ ಮಹಾವೀರ ಪಿ. ಮಿರ್ಜಿ ವಾಣಿಜ್ಯ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ರವಿ ದಂಡಗಿಯವರು ಮಾತನಾಡುತ್ತ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮನುಷ್ಯ ನಗುವುದನ್ನೇ ಮರೆತಿದ್ದಾನೆ. ನಗುವುದಕ್ಕೆಂದು ಸ್ವಲ್ಪ ಸಮಯ ಮೀಸಲಿಡಬೇಕು ಅದು ಆರೋಗ್ಯಕ್ಕೆ ಒಳ್ಳೆಯದು ಎಂದು ಹೇಳಿದರು. ಗುಂಡೇನಟ್ಟಿ ಮಧುಕರ ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ಕವನ ಬರೆಯುವುದೇ ಕಷ್ಟದ ಕೆಲಸ ಇನ್ನು ಹಾಸ್ಯ ಕವನ ಬರೆಯುವುದು ಇನ್ನೂ ಕಷ್ಟದ ಕೆಲಸ. ಹಾಸ್ಯಪ್ರಜ್ಞೆ ಇದ್ದವನು ಮಾತ್ರ ಹಾಸ್ಯವನ್ನು ಆಸ್ವಾದಿಸಲು ಸಾಧ್ಯ ಎಂದು ಹೇಳಿದರು.

# ವಿವಿಧ ಬೇಡಿಕೆ ಈಡೇರಿಸಲು ಹಡಪದ ಸಮಾಜ ಒತ್ತಾಯ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಸದಸ್ಯರು ಸುವರ್ಣಸೌಧ ಬಳಿ ಸುವರ್ಣ ಗಾರ್ಡನ್ ಟೆಂಟನಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ರಾಜ್ಯಾಧ್ಯಕ್ಷ ಸಿದ್ದಪ್ಪ ಹಡಪದ ಮಾತನಾಡಿ, 12ನೇ ಶತಮಾನದ ವಿಶ್ವಗುರು ಬಸವಣ್ಣನವರ ಆಪ್ತಕಾರ್ಯದರ್ಶಿಯಾದ ಶಿವಶರಣ ಹಡಪದ ಅಪ್ಪಣ್ಣನವರ ವಂಶಜರಾದ ನಾವು ನಮ್ಮ ಕುಲಕಸುಬು ಕ್ಷೌರಿಕ ವೃತ್ತಿಯನ್ನು ನಂಬಿ ಇತರೆ ಸಮಾಜದವರು ನಮಗೆ ಎಷ್ಟೇ ಅವಹೇಳನ ಮಾಡುತ್ತಿದ್ದರೂ ಸ್ವತಃ ಬಸವಣ್ಣನವರೇ ಕಾಯಕಕ್ಕೆ ಮಹತ್ವಕೊಟ್ಟಿದ್ದರಿಂದ ಈ ಕಸುಬನ್ನು (ಉದ್ಯೋಗ) ಮಾಡುತ್ತಾ ಜೀವನವನ್ನು ಸಾಗಿಸುತ್ತಿದ್ದೇವೆ. ಹೀಗಾಗಿ ಮುಂದುವರೆದವರ ಸಮಾಜದಲ್ಲಿ ಅತ್ಯಂತ ಕೆಳಸ್ಥರದಲ್ಲಿ ಬಾಳಿ ಬದುಕುತ್ತಿದ್ದೇವೆ. ಲಿಂಗಾಯತರು ಎಂಬ ಹಣೆಪಟ್ಟಿ ನಮ್ಮ ಜಾತಿ ಕಾಲಂದಲ್ಲಿ ಆದಿ ಅನಾದಿ ಕಾಲದಿಂದ ಯಾರದೋ ಒತ್ತಡದಿಂದಾಗಿ ನಮ್ಮ ಮುಗ್ಧ ಹಿರಿಯರು ಬರೆಸಿದ್ದರಿಂದ ಸರ್ಕಾರದ ಕಣ್ಣಿನಲ್ಲಿ ಅಧಿಕಾರಿಗಳು ನಮ್ಮನ್ನೂ ಮುಂದುವರೆದವರು ಎಂದು ತಪ್ಪುಗ್ರಹಿಕೆ ಮಾಡಿಕೊಂಡಿದ್ದಾರೆ. ನಮ್ಮಲ್ಲಿರುವ ಸಮಸ್ಯೆ ಕುರಿತು ಅನೇಕ ಬಾರಿ ಸರ್ಕಾರಕ್ಕೆ ನಮ್ಮ ಬೇಡಿಕೆಗಳ ಬಗ್ಗೆ ಮನವಿಗಳನ್ನು ಸಲ್ಲಿಸುತ್ತ, ಹೋರಾಟಗಳನ್ನು ಮಾಡುತ್ತಾ ಬಂದಿದ್ದರೂ ನಮಗೆ ನ್ಯಾಯ ದೊರಕಿಲ್ಲ.ಶೀಗ್ರೇವೆ ಸರ್ಕಾರ ನಮ್ಮ ಬೇಡಿಕೆ ಈಡೇರಿಸುವತ್ತ ಗಮನ ಹರಿಸಬೇಕು ಎಂದು ಒತ್ತಾಯಿಸಿದ್ದರು.

ಬೇಡಿಕೆಗಳು: ಹಡಪದ ಸಮಾಜ ಅಭಿವೃದ್ಧಿ ನಿಗಮ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಬೇಕು,



3 ಬಿ ಯಲ್ಲಿರುವ ಲಿಂಗಾಯಿತರ ಹಡಪದರನ್ನು 2ಎ ವರ್ಗಕ್ಕೆ ಸೇರಿಸಬೇಕು. ಹಡಪದ ಅಪಣ್ಣ ಜನ್ಮಸ್ಥಳ ಮುಸಿಬಿನಾಳ ಅಭಿವೃದ್ಧಿ ಪಡಿಸಲು ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರಕ್ಕೆ ನೀಡಬೇಕು, ಅಪಣ್ಣ ಅರಿವಿನ ಗುಹೆಯನ್ನು ಬಸವ ಕಲ್ಯಾಣ ಅಭಿವೃದ್ಧಿ ಕಾರ್ಯಕ್ಕೆ ಸೇರಿಸಬೇಕು. ಬೆಂಗಳೂರಿನಲ್ಲಿ ಸಮಾಜದ ಸಂಘಕ್ಕಾಗಿ 5 ಎಕರೆ ಭೂಮಿ ನೀಡಬೇಕು.

ಎಲ್ಲಾ ಜಿಲ್ಲಾ ವ್ಯಾಪ್ತಿಯಲ್ಲಿ ಸಮುದಾಯ ಭವನ ನಿರ್ಮಾಣ ಮಾಡಬೇಕು, ಕಾಂತರಾಜ ವರದಿಯನ್ನು ಯಥಾವತ್ ಜಾರಿ ಮಾಡಬೇಕು, ಹರಳಯ್ಯ, ಡೋಹರ ಕಕ್ಕಯ್ಯ ಇವರು ಕೂಡ ಬಸವಾಯಿತರು ಇದ್ದರೂ ಅವರ ಕುಲಕಸುಬನ್ನು ಆಧರಿಸಿ ಅವರಿಗೆ SC/ST ಗುಂಪಿಗೆ / ಪಂಗಡಕ್ಕೆ ಸೇರಿಸಿದ್ದಾರೆ. ಅದೇ ರೀತಿ ನಾವು ಕೂಡ ಬಸವಾಯಿತರು ಇದ್ದರೂ ಕುಲಕಸುಬನ್ನು ಆಧರಿಸಿ ನಮ್ಮನ್ನು ಕೂಡಾ ಪರಿಶಿಷ್ಟ ಪಂಗಡಕ್ಕೆ (ST) ಗೆ ಸೇರಿಸಬೇಕು, ಕೇಂದ್ರ ಸರ್ಕಾರವು ಈಗಾಗಲೇ ಲಿಂಗಾಯತ ಹಡಪದ ಜಾತಿಯವರನ್ನು ಶಿಕ್ಷಣ ಮತ್ತು ಉದ್ಯೋಗ ಪಡೆಯಲು 1999ರ ಆದೇಶದಲ್ಲಿ OBC ಮೀಸಲಾತಿ ನೀಡಿದ್ದಾರೆ (ಪ್ರತಿ ಲಗತ್ತಿಸಿದೆ). ಅದೇ ಪ್ರಕಾರ ಹಡಪದ ಸಮಾಜದ ಬಡ ಮಕ್ಕಳಿಗೆ ಶೈಕ್ಷಣಿಕ ಮೀಸಲಾತಿ ನೀಡಬೇಕು ಹಾಗೂ ಉದ್ಯೋಗ ಪಡೆಯಲು ಕೂಡ ಸ್ಥಾನಗಳನ್ನು ಕಾಯ್ದಿರಿಸಬೇಕು, ನಮ್ಮ ಸಮಾಜಕ್ಕೆ ರಾಜಕೀಯ ರಂಗದಲ್ಲಿ ಅಂದರೆ ಲೋಕಸಭಾ ಸದಸ್ಯರು, ಶಾಸಕರು, ಜಿಲ್ಲಾಪಂಚಾಯತಿ / ತಾಲೂಕಾ ಪಂಚಾಯತಿ / ಗ್ರಾಮಪಂಚಾಯತಿ ಸದಸ್ಯರನ್ನಾಗಿಸಲು ಮೀಸಲಾತಿ ಕಲ್ಪಿಸಬೇಕು, ಹಡಪದ (ಕ್ಷೌರಿಕ) ವೃತ್ತಿನಿರತರಿಗೆ ಮಾಸಾಶನ ನೀಡಬೇಕು ಹಾಗೂ ಆರೋಗ್ಯ ವಿಮೆ ಜಾರಿಗೊಳಿಸಬೇಕು ಹಾಗೂ ಅವರು ವೃತ್ತಿಯಿಂದ ನಿವೃತ್ತಿ ನಂತರ ಮಾಸಿಕ ಪಿಂಚಣಿ ಸೌಲಭ್ಯ ಜಾರಿಗೊಳಿಸಬೇಕು, ಪ್ರತೀ ಜಿಲ್ಲೆ, ತಾಲೂಕು ಮತ್ತು ಹೋಬಳಿಗಳಲ್ಲಿ ನಮ್ಮ ಬಡ ಕ್ಷೌರಿಕರಿಗೆ ಅನುಕೂಲವಾಗಲು ಕ್ಷೌರಿಕ ಕುಟೀರಗಳನ್ನು ಸರ್ಕಾರವೇ 10'x 10' ವಿಸ್ತೀರ್ಣದಲ್ಲಿ ಸ್ಥಾಪಿಸಿಕೊಡಬೇಕು. ಯಾವ ರೀತಿ ಸರ್ಕಾರವೇ ಲಿಡ್ಕರ್ ಅಂಗಡಿಗಳನ್ನು ಮತ್ತು ಚರ್ಮಕುಟೀರಗಳನ್ನು ಹಿಂದುಳಿದ ವರಿಗೆ ಮಾಡಿಕೊಟ್ಟಿದ್ದಾರೋ ಹಾಗೆ ನಮಗೂ ಮಾಡಿಸಿಕೊಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ಶ್ರೀಕ್ಷೇತ್ರ ತಂಗಡಗಿ ಅಪ್ಪಣ್ಣ ದೇವರ ಮಹಾಸಂಸ್ಥಾನ ಮಠ ಅನ್ನದಾನ ಭಾರತಿ ಅಪ್ಪಣ್ಣ ಮಹಾಸ್ವಾಮಿಜೀ, ಸಂಘದ ಉಪಾಧ್ಯಕ್ಷ ಸಂತೋಷ ಈ. ಹಡಪದ, ಮಂಜಪ್ಪ ಮ. ಹಡಪದ, ಬಸವರಾಜ ಎಸ್. ಹಡಪದ, ಪಿ.ಹಾಲಪ್ಪ, ಸುರೇಶ ಹಡಪದ ವಿರೂಪಾಕ್ಷಿ ಕತ್ನಳ್ಳಿ, ರಮೇಶ ಹಡಪದ, ಮಹಾಂತೇಶ ಹಡಪದ ಸೇರಿದಂತೆ ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ನೂರಾರು ಸದಸ್ಯರು ಭಾಗಹಿಸಿದ್ದರು.

# ರಾಜ್ಯಾದ್ಯಂತ ಸೈನಿಕ ಭವನ ನಿರ್ಮಾಣ ಮಾಡುವಂತೆ ಆಗ್ರಹಿಸಿ ಸೈನಿಕರ ಸಂಘಟನೆಯಿಂದ ಮನವಿ

ಬೆಳಗಾವಿ: ರಾಜ್ಯಾದ್ಯಂತ ಸೈನಿಕ ಭವನ ನಿರ್ಮಾಣ, ಹುತಾತ್ಮರಾದ ಸೈನಿಕರ ಕುಟುಂಬಕ್ಕೆ 5 ಲಕ್ಷ ರೂ. ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘಟನೆಯಿಂದ ಸುವರ್ಣಸೌಧ ಎದುರು ಪ್ರತಿಭಟನೆ ನಡೆಸಿದರು.

ಸೈನಿಕರು ದೇಶಕ್ಕಾಗಿ ತ್ಯಾಗ, ಬಲಿದಾನ ಮತ್ತು ದೇಶ ಸೇವೆ ಮಾಡಿದಂತ ಮಾಜಿ ಸೈನಿಕರು ಹಾಗೂ ಸೇವೆ ಮಾಡುತ್ತಿರುವ ಸೈನಿಕರು ಹಾಗೂ ವೀರನಾರಿಯರು, ಮಾಜಿ ಸೈನಿಕರ ವಿಧವಾ ಪತ್ನಿಯರ ಹಿತದೃಷ್ಟಿಯಿಂದ ಸರ್ಕಾರ ಸೈನಿಕರ ಮನವಿಯನ್ನು ಪರಿಗಣಿಸಿ, ಬೇಡಿಕೆಯನ್ನು ಶೀಘ್ರವೇ ಈಡೇಸಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ರಾಜ್ಯದ ಜಿಲ್ಲೆಯಲ್ಲೂ ಯುದ್ಧದ ಸ್ಮಾರಕಗಳು (ವಾರ್ ಮೆಮೊರಿಯಲ್) ನಿರ್ಮಾಣವಾಗಬೇಕು. ಸೈನ್ಯದಲ್ಲಿ ಸೇವ ಸಲ್ಲಿಸಿದ ಮಾಜಿ ಸೈನಿಕರಿಗೆ, ರಾಜ್ಯ ಸರ್ಕಾರದ ಸರ್ಕಾರಿ ಹುದ್ದೆಗಳಲ್ಲಿ ಶೇಕಡಾವಾರು 10% ಮೀಸಲಾತಿ ಕೊಡಬೇಕೆಂದು ಮಾನದಂಡನೆ ಇದ್ದರೂ ಕೂಡ.

ಎಲ್ಲಾ ಇಲಾಖೆಗಳು ಒಂದು ಅಥವಾ ಎರಡು ಪರ್ಸೆಂಟೇಜ್ % ಮೀಸಲಾತಿ ಮಾತ್ರ ಕೊಡುತ್ತಿದ್ದು ದೇಶ ಕಾದ ಸೈನಿಕರಿಗೆ ತುಂಬಾ ಅನ್ಯಾಯವಾಗುತ್ತಿದೆ ( ಉದಾರಣೆಗೆ ಅರಣ್ಯ ಇಲಾಖೆಯಲ್ಲಿ 536 ಅರಣ್ಯ ರಕ್ಷಕ, ಹುದ್ದೆಗೆ ಕಾಲ್ ಫಾರ್ ಮಾಡಿರುತ್ತಾರೆ. ಆದರೆ 10% ಮೀಸಲಾತಿ ಮಾಜಿ ಸೈನಿಕರಿಗೆ ಕೊಟ್ಟಿದ್ದರೆ,

52 ಹುದ್ದೆಗಳು, ಮಾಜಿ ಸೈನಿಕರಿಗೆ ಕೊಡಬೇಕಾಗಿತ್ತು.

ಆದರೆ ಅರಣ್ಯ ಇಲಾಖೆ ಕೇವಲ 2 ಹುದ್ದೆಗಳನ್ನು ಮಾತ್ರ ಮೀಸಲಾತಿ ಕೊಟ್ಟಿದ್ದು ತಾವು ಗಮನಿಸಬಹುದು ಈ ಒಂದು ಹುದ್ದೆಯ



ನೇಮಕಾತಿಯನ್ನು ತಡೆಯಬೇಕೆಂದು ಮನವಿ ಮಾಡಿಕೊಂಡಿರು.

**ಟೋಲ್‌ಗಳಲ್ಲಿ ಉಚಿತ ಪ್ರವೇಶಕ್ಕೆ ಅವಕಾಶ ಕಲ್ಪಿಸಿ**

ಸೈನಿಕರ ಸೇವೆ ನಂತರ ತಮ್ಮ ಮುಂದಿನ ಭವಿಷ್ಯಕ್ಕಾಗಿ ಕನಿಷ್ಠ 40–50 ಕಿ.ಮೀ ದೂರದಲ್ಲಿರುವ ನಗರ ಪ್ರದೇಶಗಳಲ್ಲಿ ಕೆಲಸಕ್ಕೆ ಸೇರಿಕೊಳ್ಳುತ್ತಾರೆ. ದಿನ 2–3 ಟೋಲ್‌ಗಳಲ್ಲಿ ಸಂಚರಿಸಬೇಕಾಗುತ್ತದೆ. ದೇಶಕ್ಕಾಗಿ ಹೋರಾಡಿದ ಮಾಜಿ ಸೈನಿಕರಿಗೆ ಟೋಲ್‌ಗಳಲ್ಲಿ ಉಚಿತ ಪ್ರವೇಶಕ್ಕೆ ಅವಕಾಶ ಕಲ್ಪಿಸಬೇಕು ಎಂದು ಮನವಿಯಲ್ಲಿ ತಿಳಿಸಿದರು.

ಕರ್ನಾಟಕ ಸರ್ಕಾರದ ಅಧೀನದಲ್ಲಿರುವ ನಿಗಮ ಮಂಡಳಿಗಳಲ್ಲಿ ಮಾಜಿ ಸೈನಿಕ ಕೋಟಾದಲ್ಲಿ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ನೌಕರರಿಗೆ ವೇತನ ಪರಿಷ್ಕರಣೆ ವಿಚಾರದಲ್ಲಿ ಬಹುದೊಡ್ಡ ಅನ್ಯಾಯವಾಗಿದೆ. ಮಾಜಿಸೈನಿಕ ಕೋಟಾದಡಿಯಲ್ಲಿ ಸೇರಿರುವ ಎಲ್ಲಾ ಇಲಾಖೆಯ ಸರ್ಕಾರಿ ನೌಕರರಿಗೆ ವೇತನ ಪರಿಷ್ಕರಣೆ 41ಸಿ ಕೆ.ಸಿ.ಆರ್. ನಿಯಮದ ಪ್ರಕಾರ ಅವಕಾಶವಿದೆ. ಆದರೆ ನಿಗಮ ಮಂಡಳಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಮಾಜಿ ಸೈನಿಕರು ಇದರಿಂದ ವಂಚಿತರಾಗಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು.

**ಯೋಧರ ಕ್ಷೇತ್ರ ಗುರುತಿಸಿ ಚುನಾವಣೆ ಅವಕಾಶ ನೀಡಿಲು ಒತ್ತಾಯ**

ಕರ್ನಾಟಕ ರಾಜ್ಯ ಸರ್ಕಾರ ಶಿಕ್ಷಕರ ಕ್ಷೇತ್ರ, ಪದವೀಧರರ ಕ್ಷೇತ್ರ ಎಂದು ಗುರುತಿಸಿ ವಿಧಾನಪರಿಷತ್ ಚುನಾವಣೆ ನಡೆಸುತ್ತದೆ ಅದೇ ರೀತಿ ಯೋಧರ ಕ್ಷೇತ್ರ ಎಂದು ಸೇರಿಸಿ ಚುನಾವಣೆ ನಡೆಸಿ ನಮ್ಮ ಸೈನಿಕರನ್ನು ವಿಧಾನ ಪರಿಷತ್ ಗೆ ಆಯ್ಕೆ ಮಾಡಬೇಕು.

ಚುನಾವಣೆಯಲ್ಲಿ ಸ್ಪರ್ಧಿಸಲು ಮೀಸಲಾತಿ ಸೌಲಭ್ಯವಿದೆ ಆದರೆ ದೇಶಕ್ಕಾಗಿ ಹುತಾತ್ಮರಾದ ಸೈನಿಕ ಕುಟುಂಬಗಳಿಗೆ ದೇಶದ ಗಡಿಗಳಲ್ಲಿ ದಿನರಾತ್ರಿ ಕಾಯುತ್ತಿರುವ ದೇಶಕ್ಕಾಗಿ ತಮ್ಮ ತನು ಮನ ಅರ್ಪಿಸಿದ ಯೋಧರಿಗೆ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸಲು ಮೀಸಲಾತಿ ಸೌಲಭ್ಯವಿಲ್ಲ. ಈ ಮೀಸಲಾತಿ ಸೌಲಭ್ಯದಿಂದ ನಾವು ವಂಚಿತರಾಗುತ್ತಿದ್ದೇವೆ. ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ಅವಕಾಶ ಸಿಗಬೇಕು. ಆದ್ದರಿಂದ ಮಾಜಿ ಸೈನಿಕರ ಉದ್ಯೋಗ ಮೀಸಲಾತಿಯಂತೆಯೇ ನಮ್ಮ ಮಾಜಿ ಸೈನಿಕರಿಗೆ ಚುನಾವಣೆಯಲ್ಲೂ ಸ್ಪರ್ಧಿಸಲು ಮೀಸಲಾತಿ ಅವಶ್ಯಕವಾಗಿ ನೀಡಬೇಕು ಎಂದು ಒತ್ತಾಯಿಸಿದರು.

ಸಂಪುಟ: 4 ಸಂಚಿಕೆ: 263 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089